ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 276 ₹ ಬೆಲೆ: 4 Thursday, 28, December,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23

ಸಂಸದ ಪ್ರತಾಪ್ ಸಿಂಹ ವಿರುದ್ಧ ಎಫ್‌ಐಆರ್

ಮೈಸೂರು: ಮೈಸೂರು ಸಂಸದ ಪ್ರತಾಪ್ ಸಿಂಹ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವ ಆರೋಪದ ಹಿನ್ನೆಲೆಯಲ್ಲಿ ಮೈಸೂರಿನ ದೇವರಾಜ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಮೈಸೂರು ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್ ಅವರು ಪ್ರತಾಪ್ ಸಿಂಹ ವಿರುದ್ಧ ದೂರು ನೀಡಿದ್ದರು. ಸದ್ಯ ಈ ದೂರಿನನ್ವಯ ಪೊಲೀಸರು ಸಂಸದರ ವಿರುದ್ಧ ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ.

ಸಿಂಹ ಹೇಳಿದ್ದೇನು..?: ಮಂಗಳವಾರ ಮೈಸೂರಿನಲ್ಲಿ ಮಾತನಾಡಿದ್ದ ಸಂಸದರು, ಮುಖ್ಯಮಂತ್ರಿಗಳ ವಿರುದ್ಧ ವಾಗ್ದಾಳಿಗಳನ್ನು ನಡೆಸಿದ್ದರು. ಸಿದ್ದರಾಮಯ್ಯ ಅವರೇ ನಿಮಗೆ ನಿಜವಾಗಲೂ ತಾಖತ್, ಧಮ್ ಇದ್ದರೆ ಅಭಿವೃದ್ಧಿ ಇಟ್ಟುಕೊಂಡು ರಾಜಕಾರಣ ಮಾಡಿ. ಆದರೆ ಈ ರೀತಿಯಾಗಿ ದ್ವೇಷದ ರಾಜಕಾರಣ ಮಾಡಬೇಡಿ ಎಂದು ಗರಂ ಆಗಿದ್ದರು.

ಸಿದ್ದರಾಮಯ್ಯ ಅವರು ಅಭದ್ರತೆಯಿಂದ ನನ್ನ ಮೇಲೆ ವೈಯಕ್ತಿಕ ದಾಳಿ ಮಾಡುತ್ತಿದ್ದಾರೆ. ರಾಜ್ಯದಲ್ಲಿ 28 ಜನ ಸಂಸದರು ಇದ್ದಾರೆ. ಆದರೆ ಪ್ರತಾಪ್ ಸಿಂಹನ ಮಾತ್ರ ಟಾರ್ಗೆಟ್ ಮಾಡುತ್ತಾರೆ ಏಕೆ?. ನಾನು ಸೋಮಾರಿ ಸಿದ್ದನ ರೀತಿ ಸುಮ್ಮನೆ ಕುಳಿತುಕೊಂಡು ಜಾತಿ ರಾಜಕಾರಣ ಮಾಡಿಲ್ಲ. ಅಭಿವೃದ್ಧಿ ರಾಜಕಾರಣ ಮಾಡುತ್ತಿದ್ದೇನೆ. ಹೀಗಾಗಿ ನಾನೇ ಟಾರ್ಗೆಟ್ ಎಂದು ಕಿಡಿಕಾರಿದ್ದರು.

ಇಂಗ್ಲಿಷ್-ಹಿಂದಿ ಬೋರ್ಡ್‌ಗಳ ಉಡೀಸ್ ಮಾಡಿದ ಕರವೇ

ಬೆಂಗಳೂರು: ವಾಣಿಜ್ಯ ಮಳಿಗೆಗಳ ನಾಮಫಲಕಗಳಲ್ಲಿ 60% ಕನ್ನಡಕ್ಕೆ ಸರ್ಕಾರದ ಸೂಚನೆ ಇದ್ದರೂ ನಿರ್ಲಕ್ಷ್ಯ ಮಾಡುತ್ತಿರುವವರ ವಿರುದ್ಧ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದ್ದಾರೆ.

ಈ ವೇಳೆ ಪ್ರಾಣವನ್ನೂ ಲೆಕ್ಕಿಸದೇ ಬೃಹತ್ ಜಾಹೀರಾತು ಫಲಕ ಏರಿ ಇಂಗ್ಲಿಷ್ನಲ್ಲಿದ್ದ ಬೋರ್ಡ್ ಅನ್ನು ಹರಿದು ಹಾಕಿದ್ದಾರೆ. ಕರವೇ ನಾರಾಯಣಗೌಡ ಬಣದ ಕಾರ್ಯಕರ್ತರು ನಾಮಫಲಕ ಮಹಾ ಅಭಿಯಾನ ಆರಂಭಿಸಿದ್ದು, ರಾಜ್ಯದ ವಿವಿಧ ಭಾಗಗಳ ಕಾರ್ಯಕರ್ತರು ಪಾಲ್ಗೊಂಡಿದ್ದಾರೆ. ಅಂಗಡಿ ಹಾಗೂ ಮಾಲ್ಗಳ ನಾಮಫಲಕಗಳಲ್ಲಿ 60% ಆದ್ಯತೆ ಕೊಡಬೇಕು. ಇಂಗ್ಲಿಷ್ ಹಾಗೂ ಹಿಂದಿ ನಾಮಫಲಕಗಳನ್ನು ತೆರವು ಮಾಡುತ್ತೇವೆ ಎಂದು ಎಚ್ಚರಿಕೆ ಕೊಟ್ಟಿದ್ದಾರೆ.

ಪ್ರತಿಭಟನೆ ವೇಳೆ ಕರವೇ ಕಾರ್ಯಕರ್ತರು ಮಾಲ್ ಒಂದರ ಮುಂಭಾಗದ ಫ್ಲೈಓವರ್ ಮೇಲೆ ನಿಂತು ಮಾಲ್ ಕಡೆಗೆ ಚಪ್ಪಲಿ ತೂರಿದ್ದಾರೆ. ಮಾಲ್ಗಳಿಗೆ ರಕ್ಷಣೆ ಒದಗಿಸಲಾಗಿದ್ದು, 100ಕ್ಕೂ ಹೆಚ್ಚು ಪೊಲೀಸರು ಮಾಲ್ ಬಳಿ ಸುತ್ತುವರಿದಿದ್ದಾರೆ. ಕೆಲವೆಡೆ ಪ್ರತಿಭಟನಾಕಾರರು ಕನ್ನಡ ಇಲ್ಲದ ನಾಮಫಲಕಗಳಿಗೆ ಮಸಿ ಬಳಿದಿದ್ದಾರೆ. ಅಲ್ಲದೇ ನಾಮಫಲಕಗಳನ್ನು ಒಡೆದು ಹಾಕಿದ್ದಾರೆ. ಈ ವೇಳೆ ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ವಾಗ್ವಾದಕ್ಕೂ ಕಾರಣವಾಗಿದೆ. ಪ್ರತಿಭಟನಾಕಾರರನ್ನು ನಿಯಂತ್ರಿಸಲು ಪೊಲೀಸರು ಲಾಠಿ ರುಚಿನೂ ತೋರಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಡಿಸಿಪಿ ಲಕ್ಷ್ಮಿಪ್ರಸಾದ್, ಪ್ರತಿಭಟನೆ ವೇಳೆ

ಅಹಿತಕರ ಘಟನೆ ನಡೆಯದಂತೆ 500 ಪೊಲೀಸರನ್ನು ನಿಯೋಜಿಸಲಾಗಿದೆ. 10 ಬಿಎಂಟಿಸಿ ಬಸ್ಗಳನ್ನು ಸಿದ್ಧತೆ ಮಾಡಿಕೊಳ್ಳಲಾಗಿದೆ. ನ್ಯಾಯಾಲಯದ ಆದೇಶ ಇರುವುದರಿಂದ ರ್ಯಾಲಿಗೆ ಅವಕಾಶ ಕೊಡುವುದಿಲ್ಲ. ಇದನ್ನೂ ಮೀರಿ ರ್ಯಾಲಿಗೆ ಮುಂದಾದರೆ ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಮುಸ್ಲಿಂ ಲೀಗ್ ಸಂಘಟನೆ ಬ್ಯಾನ್ ಮಾಡಿದ ಕೇಂದ್ರ ಸರ್ಕಾರ

ಹೊಸದಿಲ್ಲಿ: 'ಮುಸ್ಲಿಂ ಲೀಗ್ ಜಮ್ಮು ಕಾಶ್ಮೀರ' ಹೆಸರಿನ ಸಂಘಟನೆಯನ್ನು ಭಯೋತ್ಪಾದನಾ ವಿರೋಧಿ ಕಾನೂನು ಕಾನೂನು ಬಾಹಿರ ಚಟುವಟಿಕೆಗಳ (ತಡೆಗಟ್ಟುವಿಕೆ) ಕಾಯ್ದೆಯಡಿಯಲ್ಲಿ ಪಟ್ಟಿ ಮಾಡಿ, ನಿಷೇಧ ಹೇರಲಾಗಿದೆ.

ಮುಸ್ಲಿಂ ಲೀಗ್ ಜಮ್ಮು ಕಾಶ್ಮೀರವನ್ನು 'ಕಾನೂನು ಬಾಹಿರ ಸಂಘ' ಎಂದು ಘೋಷಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಬುಧವಾರ ಘೋಷಿಸಿದ್ದಾರೆ.

"ಈ ಸಂಘಟನೆ ಮತ್ತು ಅದರ ಸದಸ್ಯರು ಜಮ್ಮು ಕಾಶ್ಮೀರದಲ್ಲಿ ದೇಶ ವಿರೋಧಿ ಮತ್ತು ಪ್ರತ್ಯೇಕತಾವಾದಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಭಯೋತ್ಪಾದಕ ಚಟುವಟಿಕೆಗಳನ್ನು ಬೆಂಬಲಿಸುತ್ತಾರೆ ಮತ್ತು ಜಮ್ಮು ಕಾಶ್ಮೀರದಲ್ಲಿ ಇಸ್ಲಾಮಿಕ್ ಆಳ್ವಿಕೆಯನ್ನು ಸ್ಥಾಪಿಸಲು ಜನರನ್ನು ಪ್ರಚೋದಿಸುತ್ತಿದ್ದಾರೆ" ಎಂದು ಕೇಂದ್ರ ಸಚಿವ ಅಮಿತ್ ಶಾ ಅವರು ಹೇಳಿದರು.

"ನಮ್ಮ ರಾಷ್ಟ್ರದ ಏಕತೆ, ಸಾರ್ವಭೌಮತೆ ಮತ್ತು ಸಮಗ್ರತೆಗೆ ವಿರುದ್ಧವಾಗಿ ಕಾರ್ಯನಿರ್ವಹಿಸುವ ಯಾರನ್ನೂ ಉಳಿಸಲಾಗುವುದಿಲ್ಲ ಎಂಬ ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ಸಂದೇಶವು ಜೋರಾಗಿದೆ ಮತ್ತು ಸ್ಪಷ್ಟವಾಗಿದೆ" ಎಂದು ಗೃಹ ಸಚಿವರು ಹೇಳಿದರು.

ಗಾಲಿ ಜನಾರ್ದನ ರೆಡ್ಡಿ ಕುಟೀರಕ್ಕೆ ಬೆಂಕಿ

ಕೊಪ್ಪಳ: ಗಾಲಿ ಜನಾರ್ದನ್ ರೆಡ್ಡಿ ಕುಟೀರದಲ್ಲಿ ಬೆಂಕಿ ಅವಘಡ ಸಂಭವಿಸಿದೆ. ಕೊಪ್ಪಳದ ಗಂಗಾವತಿಯ ಆನೆಗೊಂದಿಯ ಪಂಪಾಸರೋವರದಲ್ಲಿರುವ ಕುಟೀರಕ್ಕೆ ಬೆಂಕಿ ಬಿದ್ದಿದೆ.

ಬೆಂಕಿ ಹೊತ್ತಿಕೊಂಡಿರೋದು ಗೊತ್ತಾಗುತ್ತಿದ್ದಂತೆಯೇ ಅಲ್ಲಿದ್ದವರು ಬೆಂಕಿ ನಂದಿಸಲು ಪ್ರಯತ್ನಿಸಿದ್ದಾರೆ. ಕೊನೆಗೆ ಪೊಲೀಸರು, ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿದ್ದಾರೆ. ಆದರೆ ಬೆಂಕಿಯ ಕೆನ್ನಾಲಿಗೆ ಜೋರಾಗಿದ್ದರಿಂದ ಕಟೀರ ಬಹುತೇಕ ಸುಟ್ಟು ಹೋಗಿದೆ.

ರೆಡ್ಡಿ ಅವರು ವಿಶ್ರಾಂತಿ ಪಡೆಯಲು ಕುಟೀರವರನ್ನು ನಿರ್ಮಿಸಿಕೊಂಡಿದ್ದರು. ಪಂಪಾಸರೋವರ ದೇವಸ್ಥಾನ ಜೀರ್ಣೋದ್ಧಾರದ ವೇಳೆ ಈ ಕುಟೀರವನ್ನು ನಿರ್ಮಿಸಲಾಗಿತ್ತು. ಕುಚಿಕು ಗೆಳೆಯ ಶ್ರೀರಾಮುಲು-ಜನಾರ್ದನ ರೆಡ್ಡಿ ಇಬ್ಬರು ಸೇರಿ ಇದನ್ನು ನಿರ್ಮಿಸಿದ್ದರು ಎನ್ನಲಾಗಿದೆ.

ಹೆಣದ ಮೇಲೆ ಹಣ ಮಾಡಿದ ಬಿಜೆಪಿ, ಯತ್ನಾಳ್ ಆರೋಪಕ್ಕೆ ಉತ್ತರ ಕೊಡಲಿ: ಸಚಿವ ಪ್ರಿಯಾಂಕ್ ಖರ್ಗೆ

ಹುಬ್ಬಳ್ಳಿ: ಕೋವಿಡ್ ಕಾಲದಲ್ಲಿ ಬಿಜೆಪಿಯವರು ಹೆಣದ ಮೇಲೆ ಹಣ ಮಾಡಿದ್ದಾರೆ. ಬಸನಗೌಡ ಪಾಟೀಲ್ ಯತ್ನಾಳ್ ಆರೋಪಕ್ಕೆ ವಿಜಯೇಂದ್ರ ಉತ್ತರ ಕೊಡಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ ಅವರು ಹೇಳಿದರು.

ಈ ಕುರಿತು ಸುದ್ದಿಗೋಷ್ಠಿ ನಡೆಸಿದ ಅವರು, ವಿಜಯೇಂದ್ರ ಇವಾಗ ಯತೀಂದ್ರ ಮೇಲೆ ಶ್ಯಾಡೋ ಸಿಎಮ್ ಅಂತಾ ಆರೋಪ ಮಾಡಿದರು. ಕಳೆದ ಸರ್ಕಾರದಲ್ಲಿ ಶ್ಯಾಡೋ ಸಿಎಂ ಯಾರಿದ್ದರು.? ಯತ್ನಾಳ್ ದಾಖಲೆ ಬಿಡುಗಡೆ ಮಾಡ್ತೀವಿ ಅಂತಾರೆ. ಯತ್ನಾಳ್ ಅವರಲ್ಲಿ ನಾನು ಕರ್ನಾಟಕ ಜನರ ಪರ ಮನವಿ ಮಾಡುತ್ತೇನೆ, ನೀವು ದಾಖಲೆ ಕೊಡಿ. ನೀವು ಪ್ರಮಾಣಿಕರು ಅಂತಾ ಗೊತ್ತಿದೆ ಎಂದರು.

ಯಾವದೇ ದಾಖಲೆ ಇದ್ದರೆ ನಾವು ಜಸ್ಟೀಸ್ ಮೈಕಲ್ ಕುನೋ ಅವರ ಸಮಿತಿ ಇದೆ. ಅವರಿಗೆ ದಾಖಲೆ ಕೊಡಿ, 40 ಸಾವಿರ ಕೋಟಿ ಹಗರಣ ಇದೆ, ಹೆಣದ ಮೇಲೆ ಹಣ ಮಾಡಿದ್ದಾರೆ ಎಂದ್ರೆ ಮನುಷ್ಯತ್ವ ಅಲ್ಲ. ಇದು ಕಾಂಗ್ರೆಸ್ ನಾಯಕರ ಆರೋಪ ಅಲ್ಲ. ಮಾಜಿ, ಕೇಂದ್ರ ಸಚಿವರು, ಹಾಲಿ ಶಾಸಕರ ಆರೋಪ. ಇದಕ್ಕೆ ಬಿಜೆಪಿ ರಾಜ್ಯಾಧ್ಯಕ್ಷರು, ವಿಪಕ್ಷ ನಾಯಕರು ಉತ್ತರ ಕೊಡಬೇಕು ಎಂದು ಹೇಳಿದರು.

ನಾನು ಸಿಎಂ ಸ್ಥಾನಕ್ಕೆ ರೆಡಿ ಎಂದ ಪ್ರಿಯಾಂಕ್ ಖರ್ಗೆ ಟ್ವೀಟ್ ಮೂಲಕ ಮತ್ತೆ ಹೇಳಿದ್ದೇನು? ಕೋವಿಡ್ ಭ್ರಷ್ಟಾಚಾರದಲ್ಲಿ ಕೇಂದ್ರಕ್ಕೂ ಪಾಲ ಹೋಗಿರಬಹುದು. 40 ಪರ್ಸೆಂಟ್ ಸರ್ಕಾರ ಬಿರುದು ಬಂದಿರೋದು ಬಿಜೆಪಿಯವರಿಂದ, ಕೇಂದ್ರ ನಾಯಕರು, ರಾಜ್ಯ ನಾಯಕರಿಗೂ ಪಾಲು ಹೋಗಿದೆ ಎಂದು ಹೇಳಿದರು.

ಬ್ರಿಟಿಷರ ಬೂಟು ನೆಕ್ಕೋರು ಅನ್ನೋ ಹರಿಪ್ರಸಾದ್ ಹೇಳಿಕೆ ಕುರಿತು ಮಾಧ್ಯಮ

ಪ್ರತಿನಿಧಿಗಳ ಪ್ರಶ್ನೆಗೆ ಉತ್ತರಿಸಿದ ಅವರು, ಅದರಲ್ಲಿ ತಪ್ಪೇನಿದೆ ಎಂದ ಪ್ರಿಯಾಂಕ್ ಖರ್ಗೆ ಅವರು ಪರೋಕ್ಷವಾಗಿ ಹರಿಪ್ರಸಾದ್ ಮಾತಿಗೆ ಧ್ವನಿಗೂಡಿಸಿದ್ದಾರೆ.

ಕ್ಷಮಾ ಪತ್ರ ಬರೆದಿದ್ದು ಯಾರು, ಬ್ರಿಟಿಷರ ಬಳಿ ಪೆನ್ಶನ್ ತಗೊಂಡಿದ್ದು ಯಾರು? ಬಿಜೆಪಿ ಮತ್ತು ಖಖಖ ಗೆ ಸ್ವಂತ ಇತಿಹಾಸ ಇಲ್ಲ. ಸ್ವಾತಂತ್ರ್ಯ ಹೋರಾಟದಲ್ಲಿ ಅವರ ಕೊಡುಗೆ ಇಲ್ಲ, ಅವರು ಸೃಷ್ಟಿಸಬೇಕಾಗಿದೆ, ಹಾಗಾಗಿ ವಾಟ್ಸಪ್ ಯುನಿವರ್ಸಿಟಿಯಲ್ಲಿ ಸುಳ್ಳು ಹಬ್ಬಿಸ್ತಾರೆ ಎಂದು ಕಿಡಿಕಾರಿದ ಅವರು, ಬಿಜೆಪಿಯವರು ಇತ್ತೀಚೆಗೆ ಹುಟ್ಟಿರೋದು. ಇವಾಗ ಯಾರ ಯಾರ ಬಿಜೆಪಿ ಶಾಸಕರು, ಸಂಸದರು ಪೂರ್ವಜರು ಕಾಂಗ್ರೆಸ್ ಗೆ ವೋಟ್ ಹಾಲಿರುತ್ತಾರೆಲ್ಲ. ಸಾವರ್ಕರ್ ಗೆ ಹೇಗೆ ವೀರ ಅನ್ನೋ ಬಿರುದು ಬಂತು. ಇದಕ್ಕೆಲ್ಲ ಉತ್ತರ ಕೊಡಲ್ಲ ಎಂದರು.

ಕಳೆದ ಬಾರಿ ರಾಜ್ಯದಲ್ಲಿ ಹಿಂದುತ್ವದ ಸರ್ಕಾರ ಇತ್ತು. ಇವಾಗ ಇರೋದು ಸಂವಿಧಾನದ ಸರ್ಕಾರ ಇದೆ, ದೇಶ ನಡಿತಿರೋದು ಭಗವದ್ಗೀತೆ ಮೇಲೆ ಅಲ್ಲ,ಕುರಾನ್ ಮೇಲೆ ಅಲ್ಲ, ಬೈಬಲ್ ಮೇಲೆ ಅಲ್ಲ.

ದೇಶ ನಡಿತಿರೋದು ಸಂವಿಧಾನದ ಮೇಲೆ, ಯಾರ ಏನಾದರೂ ಅನ್ನನಲಿ ಕರ್ನಾಟಕದಲ್ಲಿ ನಡಿತಿರೋದು ಸಂವಿಧಾನದ ಸರ್ಕಾರ. ಸರ್ಕಾರಗಳು ನಡೆಯೋದು ಸಂವಿಧಾನ ಮೇಲೆ, ಬಸವ ತತ್ವ, ಅಂಬೇಡ್ಕರ್ ತತ್ವ ಮೇಲೆ ಸರ್ಕಾರ ನಡೀತಿದೆ.

ಹಿಂದಿನ ಸರ್ಕಾರ ಹಿಂದೂತ್ವದ ಮೇಲೆ ನಡೀತಿತ್ತು, ಪೀಠದ ಮೇಲೆ ಕುಳಿತು ಕಾಗೇರಿ ನಾನು ಖಖಖ ನವರು ಎಂದಿದ್ದರು.

ಕೋವಿಡ್ ಭ್ರಷ್ಟಾಚಾರದಲ್ಲಿ ಕೇಂದ್ರ ನಾಯಕರ ಮೌನವಾಗಿರುವ ವಿಚಾರವಾಗಿ ಮಾತನಾಡಿ, ಅವರಿಗೂ ಕೂಡ ಪಾಲು ಹೋಗಿರಬೇಕಲ್ಲ. ಬಿಜೆಪಿಗೆ 40% ಸರ್ಕಾರ ಅಂತ ಆರೋಪ ಬಂದಿದ್ದು, ನಮ್ಮಿಂದಲ್ಲ ಅವರ ಪಕ್ಷದವರಿಂದಲೇ, ಗುತ್ತಿಗೆದಾರರ ಸಂಘದಿಂದ ಬಂದಿದೆ ಅಲ್ವಾ? ನಾವು ಭ್ರಷ್ಟಾಚಾರ ಆಗಿದೆ ಅಂತ ಅಂದ್ರು ಅಂದಿನ ಸ್ಪೀಕರ್ ಸದನದಲ್ಲಿ ಇದನ್ನ ಮುಂದುವರಿಸಬಾರದು ಇದು ಕಾನೂನು ಬಾಹಿರ ಅಂತ ಪತ್ರ ಬರೆದರು. ಯಾವತ್ತಾದ್ರೂ ಪಬ್ಲಿಕ್ ಅಕೌಂಟ್ಸ್ ಕಮಿಟಿಗೆ ಸ್ಪೀಕರ್ ಪತ್ರ ಬರೆದದ್ದು ಕೇಳಿದ್ದೀರಾ ಎಂದು ಪ್ರಶ್ನಿಸಿದರು.

ಗೋದಾಮಿನಲ್ಲಿದ್ದ 8 ಕೋಟಿ ಮೌಲ್ಯದ ಮದ್ಯ ನಾಶ ಮಾಡಿದ ಅಬಕಾರಿ ಇಲಾಖೆ

ಉತ್ತರ ಪ್ರದೇಶ: ಹೊಸ ವರ್ಷ ಸಮೀಪಿಸುತ್ತಿದ್ದಂತೆ ಉತ್ತರ ಪ್ರದೇಶದಲ್ಲಿ ಸುಮಾರು 8 ಕೋಟಿ ರೂಪಾಯಿಗಳ ಮದ್ಯದ ಬಾಟಲ್ಗಳನ್ನು ನಾಶ ಮಾಡಲಾಗಿದೆ.

ಗಾಜಿಯಾಬಾದ್‌ನ ಮೊರಾದ್ ಪ್ರದೇಶದ ಗೋದಾಮಿನಲ್ಲಿ ಈ ಮದ್ಯದ ಬಾಟಲ್ಗಳನ್ನು ಸಂಗ್ರಹಿಡಲಾಗಿದ್ದು ಬಾಟಲ್ಗಳು ಹಳೆಯದಾದ್ದರಿಂದ ಅಬಕಾರಿ ಇಲಾಖೆಯವರು ಹೊಸ ಅಬಕಾರಿ ನೀತಿಯಡಿಯಲ್ಲಿ ಸುಂಕ ಕಟ್ಟಿ ಮತ್ತೆ ಮಾರುಕಟ್ಟೆಗೆ ವ್ಯಾಪಾರಕ್ಕೆ ಬಿಟ್ಟಿದ್ದರು. ಆದರೂ ಕೂಡ ಬಾಟಲ್ಗಳು ಮಾರಾಟವಾಗದ ಹಿನ್ನೆಲೆ ಅವಧಿ ಮೀರಿದೆಯೆಂದು ಬುಲ್ಡೋಜರ್ ಹತ್ತಿಸಿ ನಾಶಪಡಿಸಿದ್ದಾರೆ. ಸುಮಾರು 7,000 ಮದ್ಯದ ಬಾಟಲ್ಗಳನ್ನು ನಾಶಪಡಿಸಲಾಗಿದ್ದು ಹೊಸ ವರ್ಷ ಸಂಭ್ರಮಾಚರಣೆಯಲ್ಲಿ ದುರ್ಬಳಕೆಯಾಗುವ ಶಂಕೆಯಡಿ ನಾಶ ಪಡಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಹಿಂದೆ ಕಳೆದ ಜುಲೈನಲ್ಲೂ ಕೂಡ 13 ಕೋಟಿ ಮೌಲ್ಯದ ಮದ್ಯದ ಬಾಟಲ್ಗಳನ್ನು ಗಾಜಿಯಾಬಾದ್‌ನಲ್ಲೇ ಅಬಕಾರಿ ಅಧಿಕಾರಿಗಳು ನಾಶಪಡಿಸಿದ್ದರು.

ಲೋಕಾಯುಕ್ತ ಬಲೆಗೆ ಬಿದ್ದ ಬಿಇಓ

ಚಿಕ್ಕಮಗಳೂರು: ಅನುಕಂಪ ಆಧಾರದ ಕೆಲಸಕ್ಕೆ ಶಿಫಾರಸ್ಸು ಮಾಡಲು ಮಹಿಳೆ ಬಳಿ 15 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲೂಕಿನಲ್ಲಿ ನಡೆದಿದೆ.

ಹೇಮಂತ್ ರಾಜ್ ಲೋಕಾಯುಕ್ತ ಬಲೆಗೆ ಬಿದ್ದ ಬಿಇಓ ಅಧಿಕಾರಿಯಾಗಿದ್ದಾರೆ. ಚಿಕ್ಕಮಗಳೂರು ತಾಲೂಕಿನ ಹಳ್ಳಿಯೊಂದರ ಮಹಿಳೆಯ ಪತಿ ಮೂಡಿಗೆರೆ ತಾಲೂಕಿನ ಹೊಯ್ಸಳಲು ಗ್ರಾಮದ ಶಾಲೆಯಲ್ಲಿ ಸಹ ಶಿಕ್ಷಕರಾಗಿ ಕೆಲಸ ಮಾಡುತ್ತಿದ್ದರು.

2023ರ ಮೇ 5 ರಂದು ಅವರು ಹೃದಯಾಘಾತದಿಂದ ಸಾವನ್ನಪ್ಪಿದ್ದರು. ಹಾಗಾಗಿ, ಶಿಕ್ಷಕರ ಪತ್ನಿ ಅನುಕಂಪದ ಆಧಾರದ ನೌಕರಿಗೆ ಶಿಫಾರಸ್ಸು ಮಾಡುವಂತೆ ಬಿಇಓಗೆ ಮನವಿ ಮಾಡಿದ್ದರು. ಅವರು ದಾಖಲೆ ಕೇಳುವ ನೆಪದಲ್ಲಿ ದಿನದೂಡುತ್ತಿದ್ದರು. ಮಹಿಳೆ ಬಿಇಓ ಕಚೇರಿಯ ಎಸ್.ಡಿ.ಎ. ಬಳಿ ಕೇಳಿದಾಗ 15000 ಸಾವಿರಕ್ಕೆ ಬೇಡಿಕೆ ಇಟ್ಟಿದ್ದರು.

ಮಹಿಳೆ ಬಿಇಓ ಬಳಿ ಮನವಿ ಮಾಡಿದಾಗ ಬಿಇಓ ಹೇಮಂತ್ ರಾಜ್ 15000 ದಿಂದ 10 ಸಾವಿರಕ್ಕೆ ಬಂದಿದ್ದರು. 10 ಸಾವಿರ ಹಣ ಪಡೆದುಕೊಳ್ಳುವಾಗ ಬಿಇಓ ಲೋಕಾಯುಕ್ತ ಬಲೆಗೆ ರೆಡ್ ಹ್ಯಾಂಡಾಗಿ ಸಿಕ್ಕಿಬಿದ್ದಿದ್ದಾರೆ. ಲೋಕಾಯುಕ್ತ ಇನ್ಸ್ ಪೆಕ್ಟರ್ ಅನಿಲ್ ರಾಥೋಡ್ ನೇತೃತ್ವದ ತಂಡ ಹೇಮಂತ್ ರಾಜ್ ಅವರನ್ನ ಬಂಧಿಸಿದೆ.

ಬಾಯಿಗೆ ಬಂದಂತೆ ಮಾತಾಡುವವರ ವಿರುದ್ಧ ಕ್ರಮ ಕೈಗೊಳ್ಳಲು ತಾಕತ್ ಇಲ್ಲ: ಸ್ವಪಕ್ಷದ ನಾಯಕರ ನಡೆಗೆ ಡಿವಿಎಸ್ ಆಕ್ರೋಶ

ಬೆಂಗಳೂರು: ಬಾಯಿಗೆ ಬಂದಂತೆ ಮಾತಾಡುವವರ ಬಾಯಿಗೆ ಬೀಗ ಹಾಕಬೇಕಾದ ಅವಶ್ಯಕತೆ ಇದೆ. ಪಕ್ಷದ ಚಟುವಟಿಕೆಗಳನ್ನು ಹೇಗೆ ಮುಂದುವರಿಸುವುದು ಎಂದು ನನಗೆ ಅನ್ನಿಸುತ್ತಿದೆ. ಆಶಿಸ್ತು ಅಂತಾ ಗೊತ್ತಿದ್ದೂ ಮಾತಾಡುವವರ ವಿರುದ್ಧ ಕ್ರಮ ಕೈಗೊಳ್ಳಲು ನಮ್ಮ ರಾಜ್ಯ ನಾಯಕರಿಗೆ ತಾಕತ್ ಇಲ್ಲ ಎನ್ನುವ ರೀತಿ ಇದೆ ಎಂದು ಮಾಜಿ ಸಿಎಂ, ಸಂಸದ ಸದಾನಂದಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಮೂಲಕ ಬಹಿರಂಗವಾಗಿ ಮಾತನಾಡುವ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ

ಕ್ರಮಕೈಗೊಳ್ಳಬೇಕೆನ್ನುವ ಅರ್ಥದಲ್ಲಿ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಮಾಜಿ ಸಿಎಂ ಡಿ.ವಿ. ಸದಾನಂದ ಗೌಡ, ಬಸನಗೌಡ ಪಾಟೀಲ್ ಯತ್ನಾಳ್ ಸೇರಿ ಡಝನ್ ಗಟ್ಟಲೇ ನಾಯಕರು ಪಕ್ಷದ ವಿರುದ್ಧ ಮಾತಾಡುತ್ತಿದ್ದಾರೆ.

ನಾನು ರಾಜ್ಯಾಧ್ಯಕ್ಷ ಆಗಿದ್ದಾಗ ಜನಾರ್ದನ ರೆಡ್ಡಿ ಸಹ ಈ ಹಿಂದೆ ಸಿಎಂ ಆಗಿದ್ದ ಕುಮಾರಸ್ವಾಮಿ ವಿರುದ್ಧ ಆರೋಪ ಮಾಡಿದ್ದರು. ಆಗ ನಾನು ಒಂದೇ ಗಂಟೆಯಲ್ಲಿ ಅವರಿಗೆ ನೋಟೀಸ್ ಕೊಟ್ಟು ಸಸ್ಪೆಂಡ್ ಮಾಡಿದ್ದೆ. ಯತ್ನಾಳ್ ರನ್ನು ನಾನು ಸಸ್ಪೆಂಡ್ ಮಾಡಿ ಬಳಿಕ ಯಡಿಯೂರಪ್ಪನವರು ಮತ್ತೆ ಒತ್ತಡ ಹಾಕಿ ಮತ್ತೆ ಪಕ್ಷಕ್ಕೆ ಸೇರಿಸಿಕೊಂಡು ಈಗ ನಾನು ಅನುಭವಿಸುತ್ತಿದ್ದೇವೆ ಎಂದರು.

ರೇಣುಕಾಚಾರ್ಯರನ್ನು ನಾನು ಸಸ್ಪೆಂಡ್ ಮಾಡಿದ್ದಾಗ ಸಿದ್ದೇಶ್ವರ ನನ್ನ ಬಳಿ

ಸ್ವಾಸ್ಥ್ಯ ಜೀವನಕ್ಕೆ ಸತ್ವಯುತ ಸಿರಿಧಾನ್ಯಗಳನ್ನು ಬಳಸಿ: ಸಚಿವ ಮಧು ಎಸ್.ಬಂಗಾರಪ್ಪ

ಶಿವಮೊಗ್ಗ: ಸ್ವಾಸ್ಥ್ಯ ಜೀವನಕ್ಕೆ ಸತ್ವಯುತ ಆಹಾರ, ಉತ್ತಮ ಆರೋಗ್ಯಕ್ಕಾಗಿ ಸಿರಿಧಾನ್ಯಗಳನ್ನು ಬಳಸಿ ರೋಗಮುಕ್ತ ಹಾಗೂ ಆರೋಗ್ಯವಂತ ಸಮಾಜವನ್ನು ನಿರ್ಮಿಸುವಲ್ಲಿ ಎಲ್ಲರೂ ಶ್ರಮಿಸುವ ಅಗತ್ಯವಿದೆ ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಧು ಎಸ್.ಬಂಗಾರಪ್ಪ ಅವರು ಹೇಳಿದರು.

ಅವರು ಕೃಷಿ ಇಲಾಖೆಯು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ನಗರದ ಕುವೆಂಪು ರಂಗಮಂದಿರದಲ್ಲಿ ಏರ್ಪಡಿಸಲಾಗಿದ್ದ ಸಿರಿಧಾನ್ಯ ಹಬ್ಬವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಹಿಂದಿನ ಕಾಲದ ಜನರು ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ಅನುಸರಿಸುತ್ತಿದ್ದ ಆಹಾರ ಪದ್ಧತಿಯನ್ನು ಅನುಸರಿಸುವ ಅಗತ್ಯವಿದೆ. ರಾಗಿ, ಜೋಳ, ನವಣೆ ಮುಂತಾದ ಹೆಚ್ಚಿನ ನಾರಿನಾಂಶವಿರುವ ಆಹಾರಗಳು ದೇಹಕ್ಕೆ ಉತ್ತಮ ಪೋಷಕಾಂಶಗಳನ್ನು ಒದಗಿಸುತ್ತವೆ ಎಂದವರು ನುಡಿದರು.

ಬದಲಾದ ಜೀವನಶೈಲಿಯಿಂದಾಗಿ ಎಲ್ಲರೂ ತಮ್ಮ ಆಹಾರ ಪದ್ಧತಿಯನ್ನು ಮರೆತಿರುವುದು ವಿಷಾಧದ ಸಂಗತಿ. ಅನೇಕ ರೀತಿಯ ಕಾಯಿಲೆಗಳ ಹತೋಟಿಗೆ ಸಿರಿಧಾನ್ಯಗಳು ಸಹಕಾರಿಯಾಗಿವೆ. ನಾನೂ ಕೂಡ ಪ್ರತಿನಿತ್ಯ ರಾಗಿಗಂಜಿ, ರಾಗಿರೊಟ್ಟಿ ಮತ್ತು ಮುದ್ದೆ ಮುಂತಾದ ಆಹಾರವನ್ನು ಸೇವಿಸುವ ಅಭ್ಯಾಸ ಹೊಂದಿದ್ದೇನೆ. – ಸಚಿವ ಮಧು ಎಸ್.ಬಂಗಾರಪ್ಪ,

ಕೃಷಿಕರು ಕೂಡ ತಮ್ಮ ಹಿಂದಿನ ಸಾಂಪ್ರದಾಯಿಕ ಕೃಷಿ ಪದ್ಧತಿಯಿಂದ ವಿಮುಖರಾಗಿ ಆಧುನಿಕ ಕೃಷಿ

ಪದ್ಧತಿಯತ್ತ ಮುಖ ಮಾಡಿದ್ದಾರೆ. ಇಲ್ಲಿಯೂ ಬದಲಾವಣೆ ಅಗತ್ಯವಾಗಿದೆ. ಸಿರಿಧಾನ್ಯಗಳ ಬಳಕೆ, ಅದರ ಮಹತ್ವದ ಕುರಿತು ಜನಸಾಮಾನ್ಯರಿಗೆ ಅರಿವಿನ ಕೊರತೆ ಇದೆ. ನಮ್ಮಲ್ಲಿಯೂ ಹಳೆಯ ಹಾಗೂ ಸಾಂಪ್ರದಾಯಿಕ ಆರೋಗ್ಯಕರ ಆಹಾರ ಪದ್ದತಿಗಳಿವೆ. ಅವುಗಳನ್ನು ಬಳಸುವ ಅಗತ್ಯವಿದೆ. ಅಲ್ಲಿಯೂ ವೈದ್ಯರಿಂದ ದೂರವಿರುವ ಆಹಾರ ಪದ್ದತಿಯನ್ನು ಅನುಸರಿಸುವ ಅಗತ್ಯವಿದೆ ಎಂದರು.

ಅತೀ ಹೆಚ್ಚಿನ ಪ್ರಮಾಣದ ಪೋಷಕಾಂಶಗಳ ಖಜಾನೆ ಎನಿಸಿರುವ ಸಿರಿಧಾನ್ಯಗಳು ದೇಹವನ್ನು ಸದೃಢಗೊಳಿಸುವುದರ ಜೊತೆಗೆ ಆರೋಗ್ಯವನ್ನು ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸಿವೆ. ಇದರಿಂದಾಗಿ ಮಾರುಕಟ್ಟೆಯಲ್ಲಿ ಸಿರಿಧಾನ್ಯಗಳಿಗೆ ಬೇಡಿಕೆ ಹೆಚ್ಚಾಗಿದೆ ಎಂದರು.

ಕಾರ್ಯಕ್ರಮದ ಆರಂಭದಲ್ಲಿ ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಪೂರ್ಣಿಮಾ ಅವರು ಮಾತನಾಡಿ, ಸಿರಿಧಾನ್ಯಗಳು ಕಡಿಮೆ ಫಲವತ್ತತೆಯ ಭೂಮಿಯಲ್ಲಿಯೂ ಸಹ ಬೆಳೆಯಲು ಸಾಧ್ಯವಾಗಿದ್ದು, ರಾಸಾಯನಿಕ ಗೊಬ್ಬರಗಳಿಲ್ಲದೆ ಬರಡು ಭೂಮಿಯಲ್ಲಿಯೂ ಸಹಜವಾಗಿ ಬೆಳೆಯಬಹುದಾಗಿದೆ. ಆದ್ದರಿಂದ ಇವುಗಳನ್ನು ಬರಗಾಲದ ಮಿತ್ರ ಎಂದೇ ಕರೆಯಲಾಗುತ್ತದೆ ಎಂದರು.

2023ನೇ ವರ್ಷವನ್ನು ಅಂತರಾಷ್ಟ್ರೀಯ ಸಿರಿಧಾನ್ಯಗಳ ವರ್ಷವೆಂದು ಘೋಷಣೆ ಮಾಡಿರುವುದರಿಂದ ಆಹಾರ ಮತ್ತು ಪೌಷ್ಟಿಕ ಭದ್ರತಾ ಯೋಜನೆಯಡಿ ರೈತರಿಗೆ ಮತ್ತು ಗ್ರಾಹಕರಿಗೆ ಸಿರಿಧಾನ್ಯಗಳ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಜಿಲ್ಲಾ ಮಟ್ಟದ ಸಿರಿಧಾನ್ಯ ಹಬ್ಬ ಕಾರ್ಯಕ್ರಮವನ್ನು ಮತ್ತು ಮಾಜಿ ಪ್ರಧಾನಿ ಚೌಧರಿ ಚರಣಸಿಂಗ್ ಅವರ ಜನ್ಮದಿನದ ಅಂಗವಾಗಿ ರೈತ ದಿನಾಚರಣೆಯನ್ನು ಇಂದೇ ಆಚರಿಸಲಾಗುತ್ತಿದೆ ಎಂದರು.

ಇಂದಿನ ಯುವಜನಾಂಗ ಒತ್ತಡದ ಬದುಕಿನಲ್ಲಿ ಆರೋಗ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ನಾಡು ಕಟ್ಟುವ ಯುವಕರೇ ಅನಾರೋಗ್ಯಕ್ಕೆ ಒಳಗಾಗುತ್ತಿದ್ದಾರೆ. ಸಿರಿಧಾನ್ಯಗಳನ್ನು ತಿನ್ನುವವರು ಆರೋಗ್ಯದಿಂದ ಸಿರಿವಂತರಾಗುವವರು ಎಂಬುವುದು ನಮ್ಮ ಗ್ರಾಮೀಣ ಜನತೆಯ ನಂಬಿಕೆ ಇದು ವೈಜ್ಞಾನಿಕವಾಗಿ ನಿಜವೂ ಹೌದು. ಈ ನಂಬಿಕೆಯೇ ಆಧುನಿಕತೆಯ ವ್ಯಸನಕ್ಕೆ ಸಿಕ್ಕ ನಗರದ ಜನತೆಯ ಜೀವನ ಶೈಲಿಗೆ ಹೊಸ ತಿರುವು ನೀಡುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಶಿವಮೊಗ್ಗ ಗ್ರಾಮಾಂತರ ಕ್ಷೇತ್ರದ ಶಾಸಕಿ ಶ್ರೀಮತಿ ಶಾರದಾ ಪೂರ್ಯಾನಾಯ್ಕ್, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ನೇಹಲ್ ಸುಧಾಕರ್ ಲೋಖಂಡೆ, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದ ಕುಲಪತಿ ಡಾ॥ಜಗದೀಶ್, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ನಗರದ ಮಹದೇವಪ್ಪ, ರೈತ ಮುಖಂಡ ಕೆ.ಟಿ.ಗಂಗಾಧರ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಸಮಗ್ರ ಕೃಷಿ ಪದ್ಧತಿಯಲ್ಲಿ ಸಾಧಕರಾದ 10ಮಂದಿಗೆ ಕೃಷಿಕ ಪ್ರಶಸ್ತಿ ಹಾಗೂ ತಲಾ ರೂ.25,000/–ಗಳ ನಗದು ಪುರಸ್ಕಾರ ನೀಡಿ ಗೌರವಿಸಲಾಯಿತು.

ದಿನಪತ್ರಿಕೆ ವಿತರಿಸುವ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ

ಶಿವಮೊಗ್ಗ: ಕಾರ್ಮಿಕ ಇಲಾಖೆಯ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ಕರ್ನಾಟಕ ರಾಜ್ಯ ದಿನ ಪತ್ರಿಕೆ ವಿತರಿಸುವ ಕಾರ್ಮಿಕರುಗಳಿಗೆ ಅಪಘಾತ ಪರಿಹಾರ ಸೌಲಭ್ಯ ಯೋಜನೆ ಜಾರಿಗೆ ತರಲಾಗಿದೆ. ಬಹುತೇಕ ದಿನಪತ್ರಿಕೆ ವಿತರಿಸುವ ಕಾರ್ಮಿಕರು ದ್ವಿಚಕ್ರ ವಾಹನಗಳನ್ನು ಬಳಸುತ್ತಿದ್ದು, ಅಪಘಾತಕ್ಕೊಳಗಾಗುವ ಸಾಧ್ಯತೆಗಳಿದ್ದು, ಈ ಕಾರ್ಮಿಕರಿಗೆ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ವಿತರಿಸುವ ಮೂಲಕ ಸಾಮಾಜಿಕ ಭದ್ರತೆ ಒದಗಿಸುವುದು ಈ ಯೋಜನೆಯ ಉದ್ದೇಶವಾಗಿದೆ.

ಎಲ್ಲಾ ದಿನಪತ್ರಿಕೆ ವಿತರಿಸುವ ಕಾರ್ಮಿಕರು ಆನ್ಲೈನ್ www.eshram.gov.in ನಲ್ಲಿ ನೋಂದಾಯಿಸಿಕೊಳ್ಳುವುದು. ಈ ಯೋಜನೆ ಸೌಲಭ್ಯ ಪಡೆಯುವವರು ಕರ್ನಾಟಕ ರಾಜ್ಯದ ನಿವಾಸಿಗಳಾಗಿದ್ದು, 16 ರಿಂದ 59 ವರ್ಷ ವಯೋಮಾನದವರಾಗಿರಬೇಕು. ಕೇಂದ್ರ ಸರ್ಕಾರದ ಇ–ಶ್ರಮ ಪೋರ್ಟಲ್ನಲ್ಲಿ ನ್ಯೂಸ್ ಪೇಪರ್ ಬಾಯ್ ಎಂಬ ವರ್ಗದಡಿ ನೋಂದಣಿಯಾಗಿರಬೇಕು. ಆದಾಯ ತೆರಿಗೆ ಪಾವತಿದಾರರಾಗಿರಬಾರದು. ಇಎಸ್ಐ ಮತ್ತು ಇಪಿಎಫ್ ಸೌಲಭ್ಯ ಹೊಂದಿರಬಾರದು.

ಈ ಯೋಜನೆಯಡಿ ಅಪಘಾತದಿಂದ ಮರಣ ಹೊಂದಿದಲ್ಲಿ ರೂ. 2.00 ಲಕ್ಷ, ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ. 2.00 ಲಕ್ಷಗಳವರೆಗೆ ಹಾಗೂ ಅಪಘಾತ ಅಥವಾ ಮಾರಾಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ ರೂ. 1.00 ಲಕ್ಷಗಳವರೆಗೆ ಸೌಲಭ್ಯವಿರುತ್ತದೆ ಎಂದು ಶಿವಮೊಗ್ಗ ಉಪ ವಿಭಾಗದ ಕಾರ್ಮಿಕ ಅಧಿಕಾರಿ ಶ್ರೀಮತಿ ಸುಮ ಹೆಚ್.ಎಸ್. ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಪರಾಧ ತಡೆ ಮಾಸಾಚರಣೆ ಅಂಗವಾಗಿ ಜಾಗೃತಿ ಜಾಥಾ

ಬಳ್ಳಾರಿ: ನಗರದಲ್ಲಿ ಬುಧವಾರದಂದು ಅಪರಾಧ ತಡೆ ಮಾಸಾಚರಣೆ–2023ರ ಅಂಗವಾಗಿ ನಗರದ ಪ್ರಮುಖ ರಸ್ತೆಗಳಲ್ಲಿ ಜಾಗೃತಿ ಜಾಥಾ ನಡೆಸಲಾಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಅವರು ಜಿಲ್ಲಾ ಪೊಲೀಸ್ ಕಚೇರಿ ಆವರಣದಲ್ಲಿ ಹಸಿರು ನಿಶಾನೆ ಹಾರಿಸುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಮಕ್ಕಳ ವಿಶೇಷ ಪೊಲೀಸ್ ಘಟಕದ ನೋಡಲ್ ಅಧಿಕಾರಿಯೂ ಆಗಿರುವ ಕೆ.ಪಿ.ರವಿಕುಮಾರ್, ಬಳ್ಳಾರಿ ನಗರ ಉಪವಿಭಾಗ ಡಿ.ಎಸ್.ಪಿ ಹಾಗೂ ಹಿರಿಯ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿ

ಚಂದ್ರಕಾಂತ ನಂದಾರೆಡ್ಡಿ, ಸ್ಥಳೀಯ ಪೊಲೀಸ್ ಠಾಣೆಗಳ ಪೊಲೀಸ್ ಇನ್ಸ್ಪೆಕ್ಟರ್, ಪಿ.ಎಸ್.ಐ ಮಹಿಳಾ ಪೊಲೀಸ್ ಸಿಬ್ಬಂದಿ, ಬಳ್ಳಾರಿ ನಗರದ ವಿವಿಧ ಶಾಲೆಗಳಿಂದ ಸುಮಾರು 500 ಜನ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರು, ಬಳ್ಳಾರಿ ನಗರದ ಒಟ್ಟು 30 ಜನ ಪೊಲೀಸ್ ಅಧಿಕಾರಿಗಳು ಭಾಗವಹಿಸಿದ್ದರು.

ಜಾಥಾವು ಜಿಲ್ಲಾ ಪೊಲೀಸ್ ಕಚೇರಿಯಿಂದ ಆರಂಭವಾಗಿ ದುರುಗಮ್ಮ ಗುಡಿ ಮೂಲಕ ಗಡಿಗಿ ಚೆನ್ನಪ್ಪ ವೃತ್ತದ ಮಾರ್ಗವಾಗಿ ಮೀನಾಕ್ಷಿ ಸರ್ಕಲ್ಲಿಂದ ಸಂಗಮ್ ವೃತ್ತದವರೆಗೆ ಸಾಗಿ ಬಂದಿತು.

ಜಾಗೃತಿ ಜಾಥಾದಲ್ಲಿ ಮಹಿಳೆ ಮತ್ತು ಮಕ್ಕಳ ಮೇಲಿನ ದೌರ್ಜನ್ಯ ತಡೆ ಕುರಿತು, ಮಾದಕ ದ್ರವ್ಯಗಳು ಹಾಗೂ ಸೈಬರ್ ಅಪರಾಧಗಳ ಕುರಿತು, ಸ್ವತ್ತಿನ ಅಪರಾಧಗಳ ಕುರಿತು, ಸಂಚಾರಿ ನಿಯಮ ಕುರಿತು ನಗರದಲ್ಲಿ ಜಾಗೃತಿ ಮೂಡಿಸಲಾಯಿತು.

ನಾಳೆ ವಿಶ್ವಮಾನವ ದಿನಾಚರಣೆ

ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರಕವಿ ಕುವೆಂಪು ಜನ್ಮದಿನ ಅಂಗವಾಗಿ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮವನ್ನು ಡಿ.29ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ರಾಜ್ಕುಮಾರ್ ರಸ್ತೆಯ ಸಂಸ್ಕೃತಿ ಸಮುಚ್ಚಯ ಆವರಣದ ಹೊಂಗಿರಣದಲ್ಲಿ ಏರ್ಪಡಿಸಲಾಗಿದೆ.

ಯುವಜನ ಸಬಲೀಕರಣ, ಕ್ರೀಡಾ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ನಾಗೇಂದ್ರ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಸಂಸದರಾದ ವೈ.ದೇವೇಂದ್ರಪ್ಪ, ಕರಡಿ ಸಂಗಣ್ಣ, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಈ.ತುಕಾರಾಂ, ಜೆ.ಎನ್.ಗಣೇಶ್, ಬಿ.ಎಂ.ನಾಗರಾಜ್, ವಿಧಾನ ಪರಿಷತ್ ಸದಸ್ಯರಾದ ಡಾ.ಚಂದ್ರಶೇಖರ್ ಬಿ.ಪಾಟೀಲ್, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಮಹಾನಗರ ಪಾಲಿಕೆಯ ಉಪಮಹಾಪೌರೆ ಬಿ.ಜಾನಕಿ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಮೋಕಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಮುಖ್ಯಸ್ಥರು ಹಾಗೂ ಸಹ ಪ್ರಾಧ್ಯಾಪಕರಾದ ಡಾ.ಕಲಾವತಿ.ಬಿ.ಜಿ ಅವರು ವಿಶೇಷ ಉಪನ್ಯಾಸ ನೀಡುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ, ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಹೊನ್ನೂರಪ್ಪ.ಟಿ ಅವರು ಉಪಸ್ಥಿತರಿರಲಿದ್ದಾರೆ.

ಅಲ್ಪಸಂಖ್ಯಾತರ ಕಾನೂನು ಪದವಿಧರರ ವೃತ್ತಿ ತರಬೇತಿ ಶಿಷ್ಯವೇತನ; ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

ಬಳ್ಳಾರಿ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2023–24ನೇ ಸಾಲಿಗೆ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದ ಕಾನೂನು ಪದವೀಧರರ ವೃತ್ತಿ ತರಬೇತಿ ಶಿಷ್ಯವೇತನಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಈಗಾಗಲೇ ಅರ್ಜಿ ಆಹ್ವಾನಿಸಿಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಜನವರಿ 10 ರವರೆಗೆ ವಿಸ್ತರಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ಹತ್ತಿರದ ಮೌಲನಾ ಆಜಾದ್ ಭವನದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ ಅಥವಾ ಬಳ್ಳಾರಿ ಕಚೇರಿ ದೂ.08392–245755, ಮೊ.8310321101, ಸಿರುಗುಪ್ಪ–9148889975, ಸಂಡೂರು–9036925966 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುವ ನಿಧಿ ಯೋಜನೆಗೆ ಆನ್ಲೈನ್ ಅರ್ಜಿ ಆಹ್ವಾನ

ಶಿವಮೊಗ್ಗ: ರಾಜ್ಯ ಸರ್ಕಾರದ 5ನೇಯ ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯು ಅನುಷ್ಠಾನಗೊಳ್ಳುತ್ತಿದ್ದು, ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

2022–23ನೇ ಸಾಲಿನಲ್ಲಿ ಯಾವುದೇ ಡಿಪ್ಲೊಮಾ ಹಾಗೂ ಪದವಿ ಉತ್ತೀರ್ಣರಾಗಿ ಆರು ತಿಂಗಳಲ್ಲಿ ಉದ್ಯೋಗ ಸಿಗದವರಿಗೆ ಈ ಯೋಜನೆ ಅನ್ವಯವಾಗಲಿದೆ. ಅನುಮೋದನೆಗೊಂಡ ಅಭ್ಯರ್ಥಿಗಳಿಗೆ ಮುಂದಿನ 24 ತಿಂಗಳು ಪದವೀಧರರಿಗೆ ಮಾಸಿಕ ರೂ. 3000/– ಹಾಗೂ ಡಿಪ್ಲೊಮಾ ಮುಗಿಸಿದವರಿಗೆ ಮಾಸಿಕ ರೂ. 1500/– ನಿರುದ್ಯೋಗ ಭತ್ಯ ನೀಡಲಾಗುವುದು. ಉದ್ಯೋಗ ಸಿಕ್ಕಿದ ಕೂಡಲೇ ಈ ಸೌಲಭ್ಯ ಸ್ಥಗಿತಗೊಳ್ಳಲಿದೆ. ಅರ್ಜಿ ಸಲ್ಲಿಸಲು ಕರ್ನಾಟಕದ ನಿವಾಸಿಯಾಗಿರಬೇಕು. 2023ರಲ್ಲಿ ಪದವಿ/ಡಿಪ್ಲೊಮಾ ಉತ್ತೀರ್ಣರಾಗಿರಬೇಕು. ಉತ್ತೀರ್ಣರಾಗಿ 180 ದಿನಗಳಾದರೂ ಉದ್ಯೋಗ ಸಿಗದೆ ನಿರುದ್ಯೋಗಿಯಾಗಿರಬೇಕು. ಅರ್ಜಿ ಸಲ್ಲಿಸಿದ ದಿನದಿಂದ ಹುದ್ದೆ ಸಿಗುವವರೆಗೂ ಅಥವಾ 2ವರ್ಷ ಗರಿಷ್ಠ ಅವಧಿವರೆಗೆ ಮಾತ್ರ ನಿರುದ್ಯೋಗ ಭತ್ಯೆ ಸಿಗಲಿದೆ.

ಅರ್ಜಿ ಸಲ್ಲಿಸುವ ದಿನಾಂಕ ಡಿ. 26 ರಿಂದ ಪ್ರಾರಂಭಗೊಂಡಿದ್ದು, ಆಸಕ್ತರು ಆಧಾರ್ ಕಾರ್ಡ, ಬ್ಯಾಂಕ್ ಪಾಸ್ಬುಕ್, ಎಸ್ಎಸ್ಎಲ್ಸಿ ಅಂಕಪಟ್ಟಿ, ಪಿಯುಸಿ ಅಂಕಪಟ್ಟಿ, ಪದವಿ ಪ್ರಮಾಣಪತ್ರಗಳು ಹಾಗೂ ರೇಷನ್ ಕಾರ್ಡ್ಗಳೊಂದಿಗೆ ಅರ್ಜಿಯನ್ನು ಕರ್ನಾಟಕ ಒನ್, ಗ್ರಾಮ ಒನ್, ಬಾಪೂಜಿ ಸೇವಾ ಕೇಂದ್ರ, ಸೇವಾಸಿಂಧು ಪೋರ್ಟಲ್ನಲ್ಲಿ ಯುವನಿಧಿ ಯೋಜನೆ ಸೇವೆ ಆಯ್ಕೆ ಮಾಡಿಕೊಂಡು ಅರ್ಜಿಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿರುತ್ತಾರೆ.

ಸ್ಪರ್ಶ ಜ್ಞಾನವಿಲ್ಲದ ಮಚ್ಚೆಗಳಿದ್ದಲ್ಲಿ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಿ: ಡಾ.ವೀರೇಂದ್ರ ಕುಮಾರ್

ಬಳ್ಳಾರಿ: ದೇಹದ ಮೈಮೇಲೆ ತಿಳಿಬಿಳಿ ತಾಮ್ರವರ್ಣದ ಸ್ಪರ್ಶ ಜ್ಞಾನವಿಲ್ಲದ ಮಚ್ಚೆಗಳು ಅಥವಾ ಮುಖದಲ್ಲಿ ಗಂಟುಗಳು, ಕಿವಿಯ ಮೇಲೆ ಗಂಟುಗಳು ಕಂಡುಬಂದಲ್ಲಿ ತಪ್ಪದೇ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಬೇಕು. ಇವು ಕುಷ್ಠರೋಗದ ಚಿಹ್ನೆಗಳಾಗಿರಬಹುದು ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಕೆ.ಜಿ.ವೀರೇಂದ್ರ ಕುಮಾರ್ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದ ಅಡಿಯಲ್ಲಿ ಬ್ರೂಸ್ಪೇಟೆ ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯ ಕೊರಚಗೆರೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಆಂದೋಲನ ಚಾಲನಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನೂರಾರು ವರ್ಷಗಳಿಂದ ಸಮುದಾಯದಲ್ಲಿ ಇವತ್ತಿಗೂ ಇರುವ ಚರ್ಮ ಮತ್ತು

ನರರೋಗದ ಕಾಯಿಲೆಯಾಗಿರುವ ಕುಷ್ಠರೋಗವು ಮೈಕೋಬ್ಯಾಕ್ಟೀರಿಯಂ ಲೆಪ್ರೈ ಎಂಬ ರೋಗಾಣುವಿನಿಂದ ಬರುತ್ತದೆ. ಚಿಕಿತ್ಸೆ ಪಡೆಯದೇ ಇರುವ ಕುಷ್ಠರೋಗಿಯು ಕೆಮ್ಮಿದಾಗ, ಸೀನಿದಾಗ ತುಂತುರು ಹನಿಗಳು ಗಾಳಿಯ ಮೂಲಕ

ಶಿವಶರಣರ ಮಾರ್ಗದಲ್ಲಿ ಸಾಗಿ: ಚನ್ನಬಸವ ಶ್ರೀ

ಕೆಂಭಾವಿ: ನಿತ್ಯ ನಿರಂತರ ನಿರಂಜನ ಪ್ರಭುವಿನ ಹುಡುಕಾಟವೇ ಶಿವಾನುಭವ ಗೋಷ್ಠಿ ಎಂದು ಪೀಠಾಧಿಪತಿ ಶ್ರೀ ಷ ಬ್ರ ಚನ್ನಬಸವ ಶಿವಾಚಾರ್ಯರು ಹೇಳಿದರು

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಜರುಗಿದ ಮಾಸಿಕ ಶಿವಾನುಭವ ಗೋಷ್ಠಿಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು ಮಣ್ಣಿನ ಈ ಕಾಯ ಮಣ್ಣಾಗುವ ಮುನ್ನ ಮಹಾದೇವನ ನೆನೆಯೋಣ,

ಶಿವ ಶರಣರು ಹಾಕಿ ಕೊಟ್ಟ ಹಾದಿಯಲಿ ಸಾಗಿ ಭಕ್ತಿ ಭಾವದಿಂದ ಸತ್ಕಾರ್ಯಕ್ಕೆ ಸದಾ ಸನ್ನದ್ಧರಾಗಿ ಭಗವಂತನ ಕೃಪೆಗೆ ಪಾತ್ರರಾಗೋಣ ಎಂದು ಆಶಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಸಾಹಿತಿ ನಿಂಗನಗೌಡ ದೇಸಾಯಿ ಮಾತನಾಡಿ ಸಾರ್ಥಕ ಜೀವನ ನಮ್ಮದಾಗಲು ಸಾಮರಸ್ಯ, ಸೌಹಾರ್ದತೆ ಸಾರೋಣ, ಸ್ಥಿತ ಪ್ರಜ್ಞೆಯೊಂದಿಗೆ ಮನಸ್ಸು ನಿಗ್ರಹಿಸಿ ಶಿವ ಸ್ಮರಣೆ ಮಾಡುತ್ತಾ ಆತ್ಮ ಪರಮಾತ್ಮನ ಸಾಕ್ಷಾತ್ಕಾರ ಮಾಡಿಕೊಡುವುದೇ ಸತ್ಸಂಗ ಎಂದು ಹೇಳಿದರು.

ಸೋಮನಾಥ ಯಾಳಗಿ, ಯಮನೇಶ ಯಾಳಗಿ, ಶಶಿಧರ ಯಾಳಗಿ ಹಾಗೂ ಪಂ ಪುಟ್ಟರಾಜ ಸಂಗೀತ ಪಾಠಶಾಲೆಯ ವಿದ್ಯಾರ್ಥಿ ಕುಮಾರಿ ಶಿಲ್ಪ ಗುರುನಾಥ ಇವರಿಂದ ಸಂಗೀತ ಕಾರ್ಯಕ್ರಮ ಮೂಡಿ ಬಂತು. ಡಾ ಯಂಕನಗೌಡ ಪಾಟೀಲ್ ನಿರೂಪಿಸಿ ವಂದಿಸಿದರು. ನಿಜಗುಣಿ ವಿಶ್ವಕರ್ಮ, ಅಭಿಷೇಕ ಪಾಟೀಲ, ಸೇರಿದಂತೆ ಅನೇಕ ಸದ್ಭಕ್ತರು, ಮಹಿಳೆಯರು ಮಕ್ಕಳು, ಉಪಸ್ಥಿತರಿದ್ದರು.

ಯುವನಿಧಿ ಸೌಲಭ್ಯಕ್ಕಾಗಿ ಹೆಸರು ನೋಂದಾಯಿಸಲು ಸೂಚನೆ: ಡಾ॥ ಆರ್.ಸೆಲ್ವಮಣಿ

ಶಿವಮೊಗ್ಗ: ಕೈಗಾರಿಕಾ ಮತ್ತು ತರಬೇತಿ ಇಲಾಖೆಯು 2022–23ನೇ ಶೈಕ್ಷಣಿಕ ಸಾಲಿನಲ್ಲಿ ಪದವಿ, ಡಿಪ್ಲೋಮಾ ಪಡೆದ ನಿರುದ್ಯೋಗಿಗಳು ತಮ್ಮ ಪದವಿಯ ನಂತರ 180ದಿನಗಳು ಕಳೆದ ನಂತರವೂ ಉದ್ಯೋಗ ಪಡೆಯದ ನಿರುದ್ಯೋಗಿಗಳಿಗೆ ಸರ್ಕಾರದ ಮಹತ್ವಾಕಾಂಕ್ಷಿ ಯುವನಿಧಿ ಯೋಜನೆಯಡಿ ನಿರುದ್ಯೋಗ ಭತ್ಯೆ ನೀಡಲು ಉದ್ದೇಶಿಸಿದ್ದು, ಅರ್ಹ ಅಭ್ಯರ್ಥಿಗಳಿಂದ ಆನ್ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಅರ್ಹರಾದ ಜಿಲ್ಲೆಯ ನಿರುದ್ಯೋಗಿ ಯುವಕರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾ॥ ಆರ್.ಸೆಲ್ವಮಣಿ ಅವರು ಹೇಳಿದರು.

ಅವರು ತಮ್ಮ ಕಚೇರಿ ಸಭಾಂಗಣದಲ್ಲಿ ಯುವನಿಧಿ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಪದವಿ, ಡಿಪ್ಲೋಮಾ

ಕಾಲೇಜುಗಳ ಪ್ರಾಂಶುಪಾಲರಿಗಾಗಿ ಏರ್ಪಡಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಜಿಲ್ಲೆಯ ಪದವಿ, ಡಿಪ್ಲೋಮಾ ಕಾಲೇಜುಗಳ ಪ್ರಾಂಶುಪಾಲರು ತಮ್ಮ ಕಾಲೇಜುಗಳಲ್ಲಿ ಹಿಂದಿನ ಸಾಲಿನಲ್ಲಿ ವ್ಯಾಸಂಗ ಪೂರ್ಣಗೊಳಿಸಿ ಪ್ರಸ್ತುತ ನಿರುದ್ಯೋಗಿಗಳಾಗಿರುವ ವಿದ್ಯಾರ್ಥಿಗಳಿಗೆ ಸೇವಾಸಿಂಧು ಪೋರ್ಟಲ್ ಮೂಲಕ ಹೆಸರು ನೋಂದಾಯಿಸಿಕೊಳ್ಳಲು ಮಾಹಿತಿ ನೀಡುವಂತೆ ಅವರು ಸೂಚಿಸಿದ ಅವರು ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಸ್ಥಳೀಯ ಸಂಸ್ಥೆಗಳ ಅಧಿಕಾರಿ–ಸಿಬ್ಬಂಧಿಗಳು ಮಾಹಿತಿ ನೀಡುವಂತೆ ಸೂಚಿಸಿದರು. ಅದಕ್ಕಾಗಿ ಶಾಲೆ–ಕಾಲೇಜು ಹಂತದಲ್ಲಿ ಈಗಾಗಲೇ ಅನುಷ್ಠಾನದಲ್ಲಿರುವ ಪ್ಲೇಸ್ಮೆಂಟ್ ಸೆಲ್ನ ನಿರ್ವಾಹಕರು ವಿಶೇಷ ಗಮನಹರಿಸುವಂತೆ ಅವರು ಸೂಚಿಸಿದರು.

ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿ ಸೌಲಭ್ಯದ ದುರುಪಯೋಗಪಡಿಸಿಕೊಂಡಲ್ಲಿ ಅಂತಹವರನ್ನು ಕಾನೂನು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದಲ್ಲದೆ ಹಣವನ್ನು ಬಡ್ಡಿಸಹಿತ ವಸೂಲಾತಿಗೆ ಕ್ರಮವಹಿಸಲಾಗುವುದು ಎಂದರು.

ಜಿಲ್ಲೆಯಲ್ಲಿ 2022–23ನೇ ಸಾಲಿನಲ್ಲಿ ತೇರ್ಗಡೆಯಾಗಿರುವ ವೃತ್ತಿಪರ ಕೋರ್ಸುಗಳು ಸೇರಿದಂತೆ ಪದವೀಧರ ನಿರುದ್ಯೋಗಿಗಳಿಗೆ ಪ್ರತಿ ತಿಂಗಳು 3,000ರೂ. ಹಾಗೂ ಡಿಪ್ಲೋಮಾ ಉತ್ತೀರ್ಣರಾದ ನಿರುದ್ಯೋಗಿಗಳಿಗೆ ಪ್ರತಿ ತಿಂಗಳು 1,500/–ರೂ. ಗಳ ನಿರುದ್ಯೋಗ ಭತ್ಯೆಯನ್ನು ಗರಿಷ್ಠ 2ವರ್ಷಗಳ ಕಾಲ ನೀಡಲಾಗುವುದು ಎಂದರು.

ಉನ್ನತ ವ್ಯಾಸಂಗಕ್ಕೆ ದಾಖಲಾತಿ ಹೊಂದಿ ವಿದ್ಯಾಭ್ಯಾಸ ಮುಂದುವರೆಸಿರುವವರು, ಸರ್ಕಾರದ ವಿವಿಧ ಇಲಾಖೆ, ಸಂಸ್ಥೆಗಳಲ್ಲಿ ಅಪ್ರೆಂಟಿಸ್ ವೇತನವನ್ನು ಪಡೆಯುತ್ತಿರುವವರು, ರಾಜ್ಯ ಹಾಗೂ ಕೇಂದ್ರದ ವಿವಿಧ ಯೋಜನೆಯಡಿ ಹಾಗೂ ಬ್ಯಾಂಕುಗಳಲ್ಲಿ ಸಾಲ ಪಡೆದು ಸ್ವಯಂ ಉದ್ಯೋಗ ಹೊಂದಿರುವವರು ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವಂತಿಲ್ಲ ಎಂದವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ನೇಹಲ್ ಸುಧಾಕರ್ ಲೋಖಂಡೆ, ಅಪರ ಜಿಲ್ಲಾಧಿಕಾರಿ ಸಿದ್ಧಲಿಂಗರೆಡ್ಡಿ, ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿ ಖಲಂದರ್ಖಾನ್ ಸೇರಿದಂತೆ ಜಿಲ್ಲೆಯ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು, ಅಧಿಕಾರಿ–ಸಿಬ್ಬಂಧಿಗಳು ಉಪಸ್ಥಿತರಿದ್ದರು.

ಬೆಂಗಳೂರು: ಕರ್ನಾಟಕ ವಿದ್ಯುತ್ ಇಂಜಿನೀಯರ್‌ಗಳ ಸಂಘದ ವತಿಯಿಂದ ಆಯೋಜಿಸಲಾಗಿದ್ದ ಸುವರ್ಣ ಮಹೋತ್ಸವ ಸ್ಮರಣಾರ್ಥ ಉಪನ್ಯಾಸದಲ್ಲಿ 2024 ನೇ ಸಾಲಿನ ತಾಂತ್ರಿಕ ಡೈರಿಯನ್ನು ಬಿಡುಗಡೆಗೊಳಿಸಲಾಯಿತು.

ಈ ಸಂಧರ್ಭದಲ್ಲಿ ಇಸ್ರೋ ಮಾಜಿ ಅಧ್ಯಕ್ಷರು ಹಾಗೂ ಪದ್ಮಶ್ರೀ ಪುರಸ್ಕೃತ ಖ್ಯಾತ ವಿಜ್ಞಾನ ಎ.ಎಸ್ ಕಿರಣ್ ಕುಮಾರ್, ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಇಂಧನ ಇಲಾಖೆ ಗೌರವ್ ಗುಪ್ತಾ, ಕೆಇಬಿ ಇಂಜಿನೀಯರುಗಳ ಸಂಘದ ಅಧ್ಯಕ್ಷರಾದ ಕೆ. ಶಿವಣ್ಣ, ಪ್ರಧಾನ ಕಾರ್ಯದರ್ಶಿಗಳಾದ ಟಿ.ಎನ್ ಸುಧಾಕರ ರೆಡ್ಡಿ ಉಪಸ್ಥಿತರಿದ್ದರು.

ನಾಪತ್ತೆಯಾದ ಮೂರು ವರ್ಷದ ಮಗು ಪೋಷಕರ ಮಡಿಲಿಗೆ

ಚಿಕ್ಕಮಗಳೂರು: ಇಳಿದು ತಪ್ಪಿಸಿಕೊಂಡಿದ್ದ ಮೂರು ವರ್ಷದ ಮಗು ಮತ್ತೆ ಪೋಷಕರ ಮಡಿಲು ಸೇರಿದೆ. ತರೀಕೆರೆ ತಾಲೂಕಿನ ತಣಿಗೇಬೈಲು ಗ್ರಾಮದ ನಿವಾಸಿಗಳಾದ ಅಜ್ಜ ಮತ್ತು ಮೂರು ವರ್ಷದ ಮೊಮ್ಮಗ ಶ್ರೇಯಸ್ ತರಿಕೇರೆಗೆ ಹೊರಟಿದ್ದ ಖಾಸಗಿ ಬಸ್ ಹತ್ತುತ್ತಾರೆ. ಬಸ್ನಲ್ಲಿ ಶ್ರೇಯಸ್ ಅಜ್ಜ ನಿದ್ರೆಗೆ ಜಾರಿದ್ದಾರೆ.

ಖಾಸಗಿ ಬಸ್ ಲಿಂಗದಹಳ್ಳಿ ನಿಲ್ದಾಣದ ಬಳಿ ಬಸ್ ಬಂದು ನಿಂತಿದೆ. ಈ ವೇಳೆ ಶ್ರೇಯಸ್ ಕೆಳೆಗೆ ಇಳಿದಿದ್ದಾನೆ. ನಿಲ್ದಾಣದ ಬಳಿ ತರೀಕೆರೆಗೆ ಹೊರಟಿದ್ದ ಮತ್ತೊಂದು ಬಸ್ ಹತ್ತಿದ್ದಾನೆ.

ನಂತರ ಬಸ್ ತರೀಕೆರೆ ಕಡೆಗೆ ಹೊರಡುತ್ತದೆ. ಆಗ ಬಸ್ಸಿನಲ್ಲಿದ್ದ ಶ್ರೇಯಸ್ ತನ್ನ ಅಜ್ಜ ಕಾಣದೆ ಅಳಲು ಆರಂಭಿಸುತ್ತಾನೆ. ಆಗ ಪ್ರಯಾಣಿಕರು ಮಗುವನ್ನು ವಿಚಾರಿಸಿ, ಠಾಣೆಗೆ ಕರೆದೊಯ್ಯುತ್ತಾರೆ. ನಂತರ ಸಾರ್ವಜನಿಕರು ಬಾಲಕನ ಭಾವಚಿತ್ರವನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುತ್ತಾರೆ.

ಇದು ಪೋಷಕರ ಗಮನಕ್ಕೆ ಬರತುತ್ತದೆ. ಕೂಡಲೆ ಪೋಷಕರು ಪೊಲೀಸ್ ಠಾಣೆಗೆ ಬಂದು ಮಗುವನ್ನು ಕರೆದುಕೊಂಡು ಹೋಗುತ್ತಾರೆ. ಪೊಲೀಸರು ಹಾಗೂ ಸಾರ್ವಜನಿಕರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

ಕಚೇರಿ ನಿರ್ವಹಣೆ ಬಾಡಿಗೆ ಕಟ್ಟಡ ಅವಶ್ಯಕ: ಆಸಕ್ತ ಮಾಲಿಕರು ಸಂಪರ್ಕಿಸಲು ಕೋರಿಕೆ

ಬೆಳಗಾವಿ: ಬೆಳಾಗಾವಿ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ನಿರ್ವಹಣೆಗೆ ಬಾಡಿಗೆ ಕಟ್ಟಡದ ಅವಶ್ಯಕತೆಯಿದ್ದು, ಬೆಳಗಾವಿ ನಗರದಲ್ಲಿ ಮೂಲ ಸೌಲಭ್ಯಗಳು (ಶೌಚಾಲಯ ಹಾಗೂ ನೀರಿನ ಸೌಲಭ್ಯ ಮುಂತಾದವು) ಹಾಗೂ ಸರ್ಮಪಕ ಸಾರಿಗೆ ಸೌಕರ್ಯ ಹೊಂದಿರುವ ಹಾಗೂ ಲೋಕೊಪಯೋಗಿ ಇಲಾಖೆ ನಿಗದಿಪಡಿಸುವ (12 ಸಾವಿರ ರೂ ರೊಳಗೆ) ಬಾಡಿಗೆ ಪಡೆಯಲು ಒಪ್ಪಿಗೆ ಇರುವ ಆಸಕ್ತ ಕಟ್ಟಡ ಮಾಲಿಕರು ಬೆಳಗಾವಿ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರನ್ನು ಕಟ್ಟಡದ ಅವಶ್ಯಕ ದಾಖಲಾತಿಗಳೊಂದಿಗೆ ಡಿ.30 2023 ರೊಳಗೆ ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿಯ ಸುಭಾಷ ನಗರ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಕಚೇರಿ ಅವಧಿಯಲ್ಲಿ ಖುದ್ದಾಗಿ ಬೇಟಿ ನೀಡಬಹುದು ಅಥವಾ ದೂರವಾಣಿ ಸಂಖ್ಯೆ: 0831– 2405692 ಗೆ ಸಂಪರ್ಕಿಸಬಹುದು ಎಂದು ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಖಾಸಗಿ ಕಂಪನಿಯಿಂದ ನೇರ ಸಂದರ್ಶನ

ಬೆಳಗಾವಿ: ಬೆಳಗಾವಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಡಿ.30 2023 ರಂದು ಬೆಳಿಗ್ಗೆ 10 ರಿಂದ ಮದ್ಯಾಹ್ನ 1 ಗಂಟೆಯವರೆಗೆ, ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಗಾಗಿ ಖಾಸಗಿ ಕಂಪನಿಯಿಂದ ನೇರ ಸಂದರ್ಶನ ವನ್ನು ಸಂಜನಾ ಕಾಂಪ್ಲೆಕ್ಸ ಕೆವಿಜಿ ಬ್ಯಾಂಕ್ ಹತ್ತಿರ ಆಜಂ ನಗರ, ಬೆಳಗಾವಿ. ಇಲ್ಲಿ ಆಯೋಜಿಸಲಾಗಿದೆ.

ಆಸಕ್ತ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಈ http://tinyurl.com/22uesy5a ವೆಬ್ ಸೈಟ್‌ನಲ್ಲಿ ಹೆಸರನ್ನು ನೋಂದಾಯಿಸಿ ಕೊಳ್ಳಬಹುದಾಗಿದೆ.

ಅಭ್ಯರ್ಥಿಗಳಿಗೆ ಉದ್ಯೋಗಾವಕಾಶವು ಉಚಿತವಾಗಿದ್ದು, ಇನ್ನುಳಿದ ಯಾವುದೇ ಸೌಲಭ್ಯಗಳು ಇರುವುದಿಲ್ಲ. ಸದರಿ ಉದ್ಯೋಗಮೇಳದಲ್ಲಿ ಪ್ರತಿಷ್ಠಿತ ಖಾಸಗಿ ಕಂಪನಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಳಿಗಾಗಿ ಮೊಬೈಲ್ 7975856566, ಸಂಖ್ಯೆ ಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ನಾಳೆ ಉಪನ್ಯಾಸಕರಿಗೆ ಸಿಇಟಿ ಮಾಸ್ಟರ್ ಟ್ರೈನರ್ ತರಬೇತಿ

ಬೆಂಗಳೂರು: ಸಿಇಟಿಗೆ ಆನ್ಲೈನ್ ಅರ್ಜಿ ತುಂಬುವಾಗ ಅಭ್ಯರ್ಥಿಗಳು ಮಾಡುವ ದೋಷಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಿಇಟಿ ವಿದ್ಯಾರ್ಥಿಮಿತ್ರ ಎಂಬ ಮಾಸ್ಟರ್ ಟ್ರೈನರ್ ತರಬೇತಿ ಕಾರ್ಯಕ್ರಮವನ್ನು ಏರ್ಪಡಿಸಿದೆ.

ಡಿಸೆಂಬರ್ 28ರಂದು ಇಲ್ಲಿನ ಕೆಇಎ ಕಚೇರಿಯಲ್ಲಿ ನಡೆಯುವ ಈ ಕಾರ್ಯಕ್ರಮದಲ್ಲಿ ಪ್ರತಿ ಜಿಲ್ಲೆಯಿಂದ ಆಯ್ದ 8 ಪದವಿಪೂರ್ವ ವಿಜ್ಞಾನ ಕಾಲೇಜಿನ ಉಪನ್ಯಾಸಕರಿಗೆ ಮಾಸ್ಟರ್ ತರಬೇತಿ ಕೊಡಲಾಗುತ್ತದೆ ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕಿ ಎಸ್. ರಮ್ಯಾ ಸೋಮವಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿಇಟಿ ಅರ್ಜಿ ತುಂಬುವಾಗ ಹೆಸರಿನಲ್ಲಿ ವ್ಯತ್ಯಾಸ, ತಪ್ಪು ಆರ್ಡಿ. ಸಂಖ್ಯೆ ನಮೂದಿಸುವುದು, ಪ್ರವರ್ಗ/ಜಾತಿ ಬರೆಯುವುದು ಸೇರಿದಂತೆ ಹಲವಾರು ತಪ್ಪುಗಳು ಅಭ್ಯರ್ಥಿಗಳಿಂದ ಆಗುತ್ತಿವೆ. ಹೀಗೆ ಪದೇ ಪದೇ ಆಗುವ ತಪ್ಪುಗಳನ್ನು ಗಮನಿಸಿ ಪರಿಣಾಮಕಾರಿ ಪರಿಹಾರ ನೀಡುವ ಸಲುವಾಗಿ ಮಾಸ್ಟರ್ ಟ್ರೈನರ್ ತರಬೇತಿ ನೀಡಲಾಗುತ್ತಿದೆ ಎಂದು ಅವರು ವಿವರಿಸಿದ್ದಾರೆ.

ಅರ್ಜಿ ಸಲ್ಲಿಸುವಾಗ ಮಾಡುವ ತಪ್ಪುಗಳಿಂದ ಸಿಇಟಿ ಪ್ರಕ್ರಿಯೆ ವಿಳಂಬವಾಗುವ ಜೊತೆಗೆ ಎಷ್ಟೋ ಸಲ ಅಭ್ಯರ್ಥಿಗಳಿಗೆ ಇಷ್ಟಪಟ್ಟ ಕೋರ್ಸುಗಳಿಗೆ ಸೀಟು ಕೈತಪ್ಪುವ ಸಾಧ್ಯತೆಯೂ ಇರುತ್ತದೆ. ಕೆಲವೊಮ್ಮೆ ಇಡೀ ಪ್ರಕ್ರಿಯೆಯಿಂದ ಹೊರಬೀಳುವ ಸಾಧ್ಯತೆ ಇರುತ್ತದೆ. ಇಂತಹ ಸಮಸ್ಯೆಗಳನ್ನು ನಿವಾರಿಸುವ ಉದ್ದೇಶ ತರಬೇತಿ ವ್ಯವಸ್ಥೆಯ ಹಿಂದಿದೆ ಎಂದಿದ್ದಾರೆ.

ಮಾಸ್ಟರ್ ಟ್ರೈನರ್ ತರಬೇತಿ ಪಡೆದವರು ನಂತರ ತಂತಮ್ಮ ಜಿಲ್ಲೆಯಲ್ಲಿನ ಪ್ರತಿಯೊಂದು ವಿಜ್ಞಾನ ಕಾಲೇಜಿನ ಇಬ್ಬರು ಅಧ್ಯಾಪಕರಿಗೆ ತರಬೇತಿ ನೀಡಲಿದ್ದಾರೆ. ಒಟ್ಟಾರೆ, ಬರುವ ಜನವರಿ 10ರಿಂದ ಸಿಇಟಿ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಆರಂಭವಾಗಲಿದ್ದು, ಆ ವೇಳೆಗೆ ಎಲ್ಲಾ ಕಾಲೇಜುಗಳಲ್ಲೂ ಈ ತರಬೇತಿ ಮುಗಿಸಲಾಗುವುದು ಎಂದು ಅವರು ಹೇಳಿದರು.

ಮಾಸ್ಟರ್ ಟ್ರೈನರ್ ಗಳಿಂದ ತರಬೇತಿ ಪಡೆದ ಉಪನ್ಯಾಸಕರು ಅಂತಿಮವಾಗಿ ತಮ್ಮ ಕಾಲೇಜಿನಲ್ಲಿನ ವಿದ್ಯಾರ್ಥಿಗಳಿಗೆ ಅರ್ಜಿ ತುಂಬುವ ಬಗ್ಗೆ ತರಬೇತಿ ನೀಡಲಿದ್ದಾರೆ. ಮೂಲಸೌಕರ್ಯ ಇರುವ ಕಡೆ ಇದೇ ಉಪನ್ಯಾಸಕರು ಕಾಲೇಜುಗಳಲ್ಲೇ ಅರ್ಜಿ ತುಂಬಲು ವ್ಯವಸ್ಥೆ ಮಾಡಲಿದ್ದಾರೆ. ಈ ಮೂಲಕ ಅರ್ಜಿ ತುಂಬುವ ವೇಳೆ ಅನಗತ್ಯ ತಪ್ಪುಗಳಾಗುವುದನ್ನು ತಪ್ಪಿಸಬಹುದು ಎಂದು ಅವರು ವಿವರಿಸಿದರು.

ಪಂ. ಆನಂದ ಭೀಮಸೇನ ಜೋಶಿ ಸಂಗೀತ ಕಾರ್ಯಕ್ರಮ

ಬೆಳಗಾವಿ: ಇದೇ ದಿ. 30 ಶನಿವಾರ ಸಾಯಂಕಾಲ 5 ಗಂಟೆಗೆ ಹಿಂದವಾಡಿಯ ಗೋಮಟೇಶ ವಿದ್ಯಾಪೀಠ ಹತ್ತಿರವಿರುವ ಐಎಂಇಆರ್ ಸಭಾಭವನದಲ್ಲಿ ಖ್ಯಾತ ಹಾರ್ಮೋನಿಯಂ ವಾದಕ ದಿ. ಕೃಷ್ಣರಾವ ಬಿ. ಹುನಗುಂದ ಇವರ ಶತಮಾನೋತ್ಸವ ಕಾರ್ಯಕ್ರಮವನ್ನು ಹುನಗುಂದ ಪರಿವಾರದವರು ಹಮ್ಮಿಕೊಂಡಿದ್ದಾರೆ.

ಭಾರತರತ್ನ ಪಂ. ಡಾ. ಭೀಮಸೇನ ಜೋಶೀಯವರ ಪುತ್ರ ಪಂ. ಆನಂದ ಭೀ. ಜೋಶಿ ಇವರ ಸಂಗೀತ ಕಾರ್ಯಕ್ರಮವಿದ್ದು ತೇಜಸ್ಸ ಆನಂದ ಜೋಶಿ ತಬಲಾ ಹಾಗೂ ಮುಕುಂದ ಗೋರೆ ಹಾರ್ಮೋನಿಯಂ ಸಾಥ ನೀಡಲಿದ್ದಾರೆ.

ಹೆಚ್ಚಿನ ಸಂಖ್ಯೆಯಲ್ಲಿ ಸಂಗೀತಾಸಕ್ತರು ಇದರ ಸದುಪಯೋಗ ಪಡೆಯುವಂತೆ ಕಾರ್ಯಕ್ರಮ ಸಂಯೋಜಕ ಅರವಿಂದ ಹುನಗುಂದ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಸಿಬಿ ಆರ್‌ಸೆಟಿ, ಬೆಳಗಾವಿ ಸಂಸ್ಥೆಯಿಂದ ಉಚಿತ ಬ್ಯೂಟಿ ಪಾರ್ಲರ ತರಬೇತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವತಿಯರಿಗೆ ಮತ್ತು ನಿರುದ್ಯೋಗಿಗಳಿಗೆ ಉದ್ಯೋಗ ತರಬೇತಿ ನೀಡುವ ಉದ್ದೇಶದಿಂದ ಬೆಳಗಾವಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿಆರ್‌ಸೆಟಿ) ವತಿಯಿಂದ ಬ್ಯೂಟಿ ಪಾರ್ಲರ 30 ದಿನಗಳ ತರಬೇತಿಯನ್ನು ಜನೇವರಿ 2 ರಂದು ನೀಡಲಾಗುತಿದ್ದು, ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಪಡೆಯುವ ಅಭ್ಯರ್ಥಿಗಳು 18 ರಿಂದ 45 ವಯಸ್ಸಿನವರಾಗಿರಬೇಕು. ಗಾಮೀಣ ಪ್ರದೇಶದವರಾಗಿರಬೇಕು (ಮೊದಲ ಆದ್ಯತೆ). ಬಿಪಿಎಲ್ ಅಥವಾ ಜಾಬ್ ಕಾರ್ಡ್ ಹೊಂದಿರಬೇಕು. ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳೆಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ, ಇಮೇಲ್ **(cbrsetibelagavi@gmail.com)** ಗೆ ಕಳುಹಿಸಬಹುದು ಅಥವಾ ಗೂಗಲ್ ಲಿಂಕ್ (https://forms.gle/Y1hntNgHijkmga8d7) ಅರ್ಜಿ ಮೂಲಕ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ಬಿಪಿಎಲ್ ಕಾರ್ಡ್, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಮೂರು ಪಾಸ್‌ಪೋರ್ಟ್ ಸೈಜ್ ಭಾವಚಿತ್ರ ಕಡ್ಡಾಯ. ಅರ್ಜಿ ಸಲ್ಲಿಸಲು ಜನೇವರಿ 1 ಕೊನೆ ದಿನವಾಗಿದೆ. ತರಬೇತಿ ಅವಧಿಯಲ್ಲಿ ಊಟ ಮತ್ತು ವಸತಿ ಉಚಿತವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪಾಟ್ ನಂ. ಸಿಎ–03 (ಪಾರ್ಟ್) ಕಣಬರ್ಗಿ ಇಂಡಸ್ಟ್ರಿಯಲ್ ಏರಿಯಾ, ಆಟೋ ನಗರ. ಬೆಳಗಾವಿ–590015. ದೂ. ನಂ. 0831–2440644, 7

ರಾಜ್ಯ ಬಿಜೆಪಿ ವಿಶೇಷ ಸಭೆಯಲ್ಲಿ ಅನಿಲ ಬೆನಕೆ ಭಾಗಿ

ಬೆಂಗಳೂರು: ರಾಜ್ಯಾಧ್ಯಕ್ಷರಾದ ವಿಜಯೇಂದ್ರ ಯಡಿಯುರಪ್ಪ ಅವರ ನೇತೃತ್ವದಲ್ಲಿ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ನೂತನ ರಾಜ್ಯ ಪದಾಧಿಕಾರಿಗಳ ಸಭೆ ನಡೆಸಿ, ನೂತನ ಪದಾಧಿಕಾರಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಮೊದಲ ಹಂತವಾಗಿ ನೂತನ ಪದಾಧಿಕಾರಿಗಳ ಸಭೆ ಮತ್ತು ಉದ್ಘಾಟನೆ ನಡೆಯಿತು.

ಬಳಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ವಿಜಯೇಂದ್ರ ಯಡಿಯುರಪ್ಪ ಅವರು ಮುಂಬರುವ ಲೋಕಸಭಾ ಚುನಾವನೆ ಹಿನ್ನಲೆಯಲ್ಲಿ ಈ ಸಭೆಕರೆಯಲಾಗಿದ್ದು ರಾಜ್ಯಾದಂತ ಪಕ್ಷದ ಸಂಘಟನೆಗಾಗಿ ಹಿರಿಯ ನಾಯಕರ ನೇತೃತ್ವ ಹಾಗೂ ಮಾರ್ಗದರ್ಶನದಂತೆ ರಾಜ್ಯದಲ್ಲಿ ಎನ್.ಡಿ.ಎ. ಎಲ್ಲಾ 28 ಕ್ಷೇತ್ರಗಳನ್ನು ಗೆಲ್ಲುವುದಾಗಿ ತಿಳಿಸಿದರು.

ನೂತನ ಪದಾಧಿಕಾರಿಗಳೆಲ್ಲರು ಎಲ್ಲ ಜಿಲ್ಲೆಗಳಿಗೆ ತೆರಳಿ ಪ್ರಮುಖದಿಂದ ಅಭಿಪ್ರಾಯ ಸಂಗ್ರಹಿಸಿ ಜಿಲ್ಲಾಧ್ಯಕ್ಷರು, ಜಿಲ್ಲಾ ಪದಾಧಿಕಾರಿಗಳನ್ನು ಆಯ್ಕೆ ಮಾಡಲಿದ್ದು ಎಲ್ಲರ ಅಭಿಪ್ರಾಯದೊಂದಿಗೆ ಪಕ್ಷವನ್ನು ಮುನ್ನಡೆಸುವ ತಿರ್ಮಾನ ಕೈಗೊಳ್ಳಲಾಯಿತು.

ನಂತರ ಎಲ್ಲರ ಅಭಿಪ್ರಾಯ ಪಡೆದು ರಾಜ್ಯ ಸರ್ಕಾರದ ವೈಫಲ್ಯದ ವಿರುದ್ಧ ಹೋರಾಟ, ಪಕ್ಷ ಸಂಘಟನೆ, ಲೋಕಸಭಾ ಚುನಾವನೆ ಎದುರಿಸುವುದರ ಕುರಿತು ಸಲಹೆ ಪಡೆದರು.

ರಾಜ್ಯದಲ್ಲಿ ತಳಮಟ್ಟದ ಸಂಘಟನೆ, ಹೋರಾಟ ಮತ್ತು ಪ್ರತಿಭಟನೆಯ ರೂಪುರೇಷೆ ಬಗ್ಗೆ ಚರ್ಚಿಸಲಾಯಿತು.

ಬಿಜೆಪಿ ರೈತರ ವಿರುದ್ಧ ನಡೆಯುತ್ತಿರುವ ಸರ್ಕಾರ ಹಾಗೂ ಸಚಿವರ ವಿರುದ್ಧ ಹೋರಾಡಲಿದ್ದು ರೈತ ಸಮುದಾಯಕ್ಕೆ ಆತ್ಮ ವಿಶ್ವಾಸ ಹಾಗೂ ಧೈರ್ಯತುಂಬುವ ಕೆಲಸ ಬಿಜೆಪಿ ಮಾಡಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಬಿಜೆಪಿ ಕಾರ್ಯದರ್ಶಿಗಳಾದ ವಿ. ಸುನೀಲ ಕುಮಾರ್, ಪಿ.ರಾಜೀವ, ಪ್ರೀತಮಗೌಡಾ, ನಂದೀಶ ರೇಡ್ಡಿ, ರಾಜ್ಯ ಸಂಘಟನಾ ಪ್ರಧಾನ ಕಾರ್ಯದರ್ಶಿಗಳಾದ ರಾಜೇಶ ಜಿ.ವಿ., ರಾಜ್ಯ ಬಿಜೆಪಿ ಉಪಾಧ್ಯಕ್ಷ ಅನಿಲ ಬೆನಕೆರೊಂದಿಗೆರಾಜ್ಯ ಪದಾಧಿಕಾರಿಗಳು ಮತ್ತು ಪ್ರಮುಖರು ಉಪಸ್ಥಿತರಿದ್ದರು.

ಯಾರೊಬ್ಬರೂ ಗೃಹಲಕ್ಷ್ಮೀಯಿಂದ ವಂಚಿತರಾಗ ಬಾರದೆಂದು ಅದಾಲತ್: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ಗೃಹಲಕ್ಷ್ಮೀ ಯೋಜನೆಯ ಯಾವೊಬ್ಬ ಫಲಾನುಭವಿಗಳೂ ಸಹ ಯೋಜನೆಯಿಂದ ವಂಚಿತರಾಗಬಾರದು. ಈ ಹಿನ್ನೆಲೆಯಲ್ಲಿ ಮೂರು ದಿನಗಳ ಕಾಲ ರಾಜ್ಯದ ಎಲ್ಲ ಗ್ರಾಮ ಪಂಚಾಯ್ತಿಗಳಲ್ಲಿ ವಿಶೇಷ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬೆಳಗಾವಿ ತಾಲೂಕಿನ ಹಲಗಾದಲ್ಲಿ ಬುಧವಾರ ಗೃಹಲಕ್ಷ್ಮೀ ಅದಾಲತ್ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಗೃಹಲಕ್ಷ್ಮೀ ಯೋಜನೆಗೆ ಸಂಬಂಧಿಸಿದಂತೆ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಗ್ರಾಮ ಪಂಚಾಯ್ತಿ ಮಟ್ಟದಲ್ಲಿ ವಿಶೇಷ ಶಿಬಿರಗಳನ್ನು ಆಯೋಜಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೀಡಿರುವ ಸೂಚನೆಯ ಹಿನ್ನೆಲೆಯಲ್ಲಿ ಡಿ.29ರವರೆಗೆ ವಿಶೇಷ ಶಿಬಿರಗಳು ರಾಜ್ಯಾದ್ಯಂತ ನಡೆಯಲಿವೆ ಎಂದು ತಿಳಿಸಿದರು.

ಗೃಹಲಕ್ಷ್ಮೀ ಯೋಜನೆಯ ಅನುಷ್ಠಾನದಲ್ಲಿ ಉಂಟಾಗುವ ತಾಂತ್ರಿಕ ಸಮಸ್ಯೆಗಳನ್ನು ನಿವಾರಿಸಿ ಸ್ಥಳದಲ್ಲಿಯೇ ಪರಿಹಾರ ನೀಡುವ ನಿಟ್ಟಿನಲ್ಲಿ ವಿಶೇಷ ಶಿಬಿರ ಆಯೋಜಿಸಲಾಗಿದೆ. ಯೋಜನೆಯ ಫಲಾನುಭವಿಗಳಿಗೆ ಏನಾದರೂ ಸಮಸ್ಯೆಗಳಿದ್ದರೆ ನಿಮ್ಮ ವ್ಯಾಪ್ತಿಯ ಗ್ರಾಮ ಪಂಚಾಯ್ತಿ ಕಚೇರಿಗೆ ತೆರಳಿ ಪರಿಹಾರ ಕಂಡುಕೊಳ್ಳುವಂತೆ ಸೂಚಿಸಿದರು.

ಬೆಳಗಾವಿ ಜಿಲ್ಲೆಯಲ್ಲಿಯೇ ಸುಮಾರು 11 ಲಕ್ಷ ಗೃಹಲಕ್ಷ್ಮೀ ಯೋಜನೆ ಫಲಾನುಭವಿಗಳಿದ್ದಾರೆ. ತಿಂಗಳಿಗೆ 202 ಕೋಟಿ ಹಣವನ್ನು ನೀಡಲಾಗುತ್ತಿದೆ. ಹಲಗಾ ಗ್ರಾಮವೊಂದರಲ್ಲಿಯೇ 1600 ಫಲಾನುಭವಿಗಳಿದ್ದಾರೆ.

ಹಲಗಾ ಗ್ರಾಮದ ಕೆಲ ಫಲಾನುಭವಿಗಳು ಕಳೆದ ಮೂರು ತಿಂಗಳಿಂದ ಗೃಹಲಕ್ಷ್ಮೀ ಹಣ ಬಂದಿಲ್ಲ ಎಂದು ಸಮಸ್ಯೆ ತೋಡಿಕೊಂಡಿದ್ದಾರೆ.

ಕೆಲವರಿಗೆ ಬ್ಯಾಂಕ್ ಖಾತೆಯ ಸಮಸ್ಯೆ ಇದೆ. ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಆಗಿಲ್ಲ, ಕೆವೈಸಿ ಆಗಿಲ್ಲ, ಹೀಗೆ ವಿವಿಧ ತಾಂತ್ರಿಕ ಕಾರಣಗಳಿಂದಾಗಿ ಅವರಿಗೆ ಹಣ ಹೋಗಿಲ್ಲ. ವಿಶೇಷ ಶಿಬಿರದಲ್ಲಿ ಈ ಎಲ್ಲ ಸಮಸ್ಯೆಗಳಿಗೆ ಪರಿಹಾರ ಒದಗಿಸಲಾಗುವುದು ಎಂದು ಹೇಳಿದರು.

ಇದೇ ವೇಳೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಗ್ರಾಮ ಪಂಚಾಯಿತಿ ಕಚೇರಿಗೆ ಆಗಮಿಸಿದ್ದ ಹಲವು ಫಲಾನುಭವಿಗಳನ್ನು ಸ್ವತಃ ಭೇಟಿಯಾಗಿ ಸಮಸ್ಯೆ ಆಲಿಸಿದರು.

ಸ್ಥಳದಲ್ಲಿಯೇ ಪರಿಹಾರವನ್ನು ಒದಗಿಸಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪ್ರಬಾರಿ ಉಪ ನಿರ್ದೇಶಕಿ ರೇವತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಗ್ರಾಮ ಪಂಚಾಯ್ತಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

ದೆಹಲಿಯಲ್ಲಿ ಜನವರಿ 28 ರಂದು ಅಖಿಲ ಭಾರತ ವಿಶ್ವಕರ್ಮ ರಾಷ್ಟ್ರೀಯ ಸಮಾವೇಶ

ಬೆಂಗಳೂರು: ಶ್ರೀಮಂತ ಸಾಂಸ್ಕೃತಿಕ ಹಿನ್ನೆಲೆಯಳ್ಳ ಹಾಗೂ ದೇಶಾದ್ಯಂತ 9.5 ಕೋಟಿ ಜನಸಂಖ್ಯೆ ಹೊಂದಿರುವ ಪ್ರಮುಖ ಸಮುದಾಯವಾಗಿದ್ದರೂ ಸಮಾಜದ ಎಲ್ಲ ರಂಗಗಳಲ್ಲೂ ಹಿಂದುಳಿದಿದೆ ವಿಶ್ವಕರ್ಮ ಸಮುದಾಯ. ಈ ಸಮುದಾಯ ಅಭ್ಯುದಯದ ನೀಲನಕ್ಷೆ ರೂಪಿಸುವ ಹೆಗ್ಗುರಿಯೊಂದಗೆ ಅಖಿಲ ಭಾರತ ವಿಶ್ವಕರ್ಮ ಸಮಾವೇಶ ನವದೆಹಲಿಯಲ್ಲಿ ಜನವರಿ 28ರಂದು ನಡೆಯಲಿದೆ.

ದೆಹಲಿಯ ಲೀಲಾ ಪ್ಯಾಲೇಸ್ ಹೋಟೆಲ್ ನಲ್ಲಿ ನಡೆಯಲಿರುವ ಈ ಸಮಾವೇಶಕ್ಕೆ ವಿವಿಧ ರಾಜ್ಯಗಳ ಸಚಿವರು, ರಾಜಕಾರಣಿಗಳು, ಉನ್ನತ ಅಧಿಕಾರಿಗಳು, ಉದ್ಯಮಿಗಳು, ಸಾಹಿತ್ಯ, ಸಂಗೀತ, ಸಿನಿಮಾ ಕ್ಷೇತ್ರದ ಗಣ್ಯರು, ಚಿಂತಕರು ಸೇರಿದಂತೆ ವಿಶ್ವಕರ್ಮ ಸಮಾಜದ ಕೆನೆಪದರವೇ ಆಗಮಿಸಲಿದೆ.

ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ನೆಲೆಸಿರುವ ಸುಮಾರು 9.5 ಕೋಟಿ ಅರ್ಥಾತ್ ದೇಶದ ಜನಸಂಖ್ಯೆಯ ಶೇ. 9ರಷ್ಟು ಜನಸಂಖ್ಯೆಯುಳ್ಳ ವಿಶ್ವಕರ್ಮ ಸಮುದಾಯದ ಸಬಲೀಕರಣ, ಏಕತೆ, ಹಿತಚಿಂತನೆ ಹಾಗೂ ಮುಂದಿನ ಜನಾಂಗವನ್ನು ಶೈಕ್ಷಣಿಕ ಹಾಗೂ ಔದ್ಯೋಗಿಕ ಕ್ಷೇತ್ರದಲ್ಲಿ ಹೇಗೆ ಸಶಕ್ತಗೊಳಿಸಬೇಕು ಎಂಬ ಬಗ್ಗೆ ಇಡೀ ಸಮುದಾಯದ ಮುಂಚೂಣಿ ನಾಯಕರು ವಿಸ್ತೃತ ಚರ್ಚೆ ನಡೆಸಲಿದ್ದಾರೆ.

ಜತೆಗೆ, ವಿಶ್ವಕರ್ಮ ಸಮುದಾಯವನ್ನು ರಾಷ್ಟ್ರಮಟ್ಟದಲ್ಲಿ ಸಂಘಟಿಸುವ ಮಾರ್ಗಸೂಚಿಯನ್ನು ಸಿದ್ದಪಡಿಸಲಿದ್ದಾರೆ.

ಕರ್ನಾಟಕದ ವಿಧಾನಪರಿಷತ್ ಮಾಜಿ ಸದಸ್ಯ ರಘು ಆಚಾರ್ ಅವರ ಸಾರಥ್ಯದಲ್ಲಿ ಈ ಪ್ರಮುಖ ಸಮಾವೇಶ ನಡೆಯಲಿದ್ದು, ನಿವೃತ್ತ ಡಿಜಿಪಿ ಸಂಗ್ರಾಮ್ ಜಂಗಿಡ್ ಅವರ ಮಾರ್ಗದರ್ಶನದಲ್ಲಿ ನಡೆಯುತ್ತಿದೆ. ಸಮಾವೇಶದ ಸಂಘಟನೆಯ ಜವಾಬ್ದಾರಿಯನ್ನು ಬಿ. ರಾಜಶೇಖರ್ ಅವರು ವಹಿಸಿಕೊಂಡಿದ್ದಾರೆ.

ಉತ್ತರ ಪ್ರದೇಶದಲ್ಲಿ 1.5 ಕೋಟಿ ಜನಸಂಖ್ಯೆ, ಬಿಹಾರ ಹಾಗೂ ಮಹಾರಾಷ್ಟ್ರದಲ್ಲಿ 75 ಲಕ್ಷ, ಗುಜರಾತಿನಲ್ಲಿ 50 ಲಕ್ಷ ಸೇರಿದಂತೆ ದೇಶದಲ್ಲಿ 9.5 ಕೋಟಿ ಜನಸಂಖ್ಯೆ ಅರ್ಥಾತ್ ದೇಶದ ಜನಸಂಖ್ಯೆಯ ಶೇ. 9ರಷ್ಟು ವಿಶ್ವಕರ್ಮ ಸಮುದಾಯವಿದೆ.

ಇಷ್ಟುದೊಡ್ಡ ಸಂಖ್ಯೆಯ ಸಮುದಾಯವಾದರೂ ರಾಜಕೀಯವಾಗಿ, ಶೈಕ್ಷಣಿಕವಾಗಿ ಹಾಗೂ ಸಾಮಾಜಿಕವಾಗಿ ಮುಂದುವರೆದಿಲ್ಲ. ತನ್ನ ಸಂಖ್ಯೆಗೆ ಅನುಗುಣವಾಗಿ ಪ್ರಾತಿನಿಧ್ಯವನ್ನು ಸಮಾಜದಲ್ಲಿ ಗಳಿಸಿಲ್ಲ.

ಅದನ್ನು ಸಾಧಿಸುವುದು ಹೇಗೆ ಎಂಬ ಬಗ್ಗೆ ಜನವರಿ 28 ರಂದು ಬೆಳಿಗ್ಗೆ 9 ಗಂಟೆಯಿಂದ ರಾತ್ರಿ 9.30 ಗಂಟೆವರೆಗೆ ನಡೆಯಲಿರುವ ಸಮಾವೇಶದಲ್ಲಿ ವಿಶ್ವಕರ್ಮ ಸಮುದಾಯದ ಎಲ್ಲಾ ಪಕ್ಷಗಳ ಸಂಸದರು, ಶಾಸಕರು, ಮಾಜಿ ಸಂಸದರು, ಶಾಸಕರು, ಜನಪ್ರತಿನಿಧಿಗಳು, ಉದ್ಯಮ ವಲಯದ ಪ್ರಮುಖ ನಾಯಕರು, ಸಮುದಾಯದ ಅಖಿಲ ಭಾರತ ನಾಗರಿಕ ಸೇವಾ ಅಧಿಕಾರಿಗಳು ಸೇರಿ ವಿಸ್ತೃತ ಚರ್ಚೆ ನಡೆಸಲಿದ್ದಾರೆ.

ಮುಂದಿನ ಜನಾಂಗವು ಶಿಕ್ಷಣರಂಗದಲ್ಲಿ ಉನ್ನತವಾದುದನ್ನು ಸಾಧಿಸಬೇಕು. ಉತ್ತಮ ಔದ್ಯೋಗಿಕ ಅವಕಾಶ ಲಭ್ಯವಾಗುವಂತೆ ಮಾಡಬೇಕು. ಸಮುದಾಯವು ರಾಷ್ಟ್ರಮಟ್ಟದಲ್ಲಿ ಒಂದು ಶಕ್ತಿಯಾಗಿ ಸಂಘಟಿತವಾಗಬೇಕು.

ಒಟ್ಟಾರೆ ವಿಶ್ವಕರ್ಮ ಸಮುದಾಯದ ಶ್ರೇಯೋಭಿವೃದ್ಧಿಗೆ ಏನೇನು ಮಾಡಬೇಕು ಎಂಬ ಬಗ್ಗೆ ಸೂಕ್ತ ನಿರ್ಣಯಗಳನ್ನು ಕೈಗೊಂಡು ಜನಾಂಗದ ಅಭಿವೃದ್ಧಿಗೆ ಶ್ರಮಿಸುವ ಗುರಿ ಹೊಂದಲಾಗಿದೆ.

ಈ ಸಮಾವೇಶ ವಿಶ್ವಕರ್ಮ ಜನಾಂಗದ ಇತಿಹಾಸದಲ್ಲೇ ಮಹತ್ವದ ಘಟ್ಟವಾಗಲಿದೆ. ಈ ಸಮಾವೇಶದಲ್ಲಿ ಕೈಗೊಳ್ಳುವ ನಿರ್ಣಯಗಳು ಚಾಚೂ ತಪ್ಪದೇ ಪಾಲನೆಯಾಗಲಿದ್ದು, ಮುಂದಿನ ಪೀಳಿಗೆಯ ಸಬಲೀಕರಣದ ಗುರಿಯನ್ನು ಸಾಧಿಸಲಿದೆ ಎಂದು ಸಮಾವೇಶದ ಸಂಘಟಕ ರಘು ಆಚಾರ್ ಹೇಳುತ್ತಾರೆ.

ಕಾಂತರಾಜು ವರದಿ ಜಾರಿಗೆ ಒತ್ತಾಯಿಸಿ ಜ. 28ರಂದು ಬೃಹತ್ ಮಟ್ಟದ ಅಹಿಂದಾ ಸಮಾವೇಶ

ಬೆಂಗಳೂರು: ಕಾಂತರಾಜು ಕಮಿಟಿ ವರದಿ ಜಾರಿಗೆ ಒತ್ತಾಯಿಸಿ ಜನವರಿ 28 ರಂದು ಬೃಹತ್ ಅಹಿಂದಾ ಸಮಾವೇಶ ನಡೆಸಲು ಶೋಷಿತ ಹಾಗೂ ಹಿಂದುಳಿದ ವರ್ಗಗಳ ಮಹಾ ಒಕ್ಕೂಟ ನಿರ್ಧರಿಸಿದೆ.

ಕೋಟೆ ನಾಡು ಚಿತ್ರದುರ್ಗದಲ್ಲಿ ಸಮಾವೇಶ ನಡೆಯಲಿದೆ. ಈ ಹಿಂದೆ ಡಿಸೆಂಬರ್ 30ಕ್ಕೆ ಸಮಾವೇಶ ನಿಗದಿಯಾಗಿತ್ತು. ಅಂತಿಮವಾಗಿ ಜನವರಿ 28ರಂದು ಅಹಿಂದಾ ಸಮಾವೇಶ ಆಯೋಜನೆಗೆ ತೀರ್ಮಾನ ಮಾಡಲಾಗಿದೆ. ಶೋಷಿತರ ಜಾಗೃತಿ ಸಮಾವೇಶ ಎಂಬ ಹೆಸರಿನಡಿಯಲ್ಲಿ ಕಾರ್ಯಕ್ರಮ ನಡೆಸಲು ತೀರ್ಮಾನಿಸಲಾಗಿದ್ದು, ಬೆಳಗ್ಗೆ 11 ಗಂಟೆಗೆ ಚಿತ್ರದುರ್ಗದ ಶ್ರೀ ಬಸವ ಮೂರ್ತಿ ಮಾದರ ಚೆನ್ನಯ್ಯ ಪೀಠದ ಪಕ್ಕದ ಮೈದಾನದಲ್ಲಿ ಸಮಾವೇಶ ಆಯೋಜಿಸಲಾಗಿದೆ.

ಪ್ರಬಲ ಸಮುದಾಯಗಳ ವಿರೋಧಕ್ಕೆ ಸೆಡ್ಡು ಹೊಡೆಯಲು ಸಮಾವೇಶ ಆಯೋಜಿಸಲಾಗಿದ್ದು, ಸಿಎಂ ಸಿದ್ದರಾಮಯ್ಯ ಅವರನ್ನು ಸಮಾವೇಶಕ್ಕೆ ಆಹ್ವಾನಿಸಲು ತೀರ್ಮಾನಿಸಲಾಗಿದೆ. ಅಲ್ಪಸಂಖ್ಯಾತ, ದಲಿತ, ಎಸ್‌ಸಿ, ಎಸ್‌ಟಿ ರಾಜಕೀಯ ನಾಯಕರಿಗೂ ಆಹ್ವಾನ ನೀಡಲು ತೀರ್ಮಾನಿಸಲಾಗಿದ್ದು, ಈ ಮೂಲಕ ಅಹಿಂದಾ ವರ್ಗ ಶಕ್ತಿ ಪ್ರದರ್ಶನಕ್ಕೆ ಸಜ್ಜಾಗಿದೆ.

ಅಹಿಂದಾ ಸಮಾವೇಶದ ಹಕ್ಕೊತ್ತಾಯಗಳು ಏನು?

* ಹೆಚ್. ಕಾಂತರಾಜು ವರದಿಯನ್ನು ರಾಜ್ಯ ಸರ್ಕಾರ ಸ್ವೀಕರಿಸಿ ಯಥವತ್ತಾಗಿ ಅಂಗೀಕರಿಸಿ ಜಾರಿಗೊಳಿಸಬೇಕು.
* ಕೇಂದ್ರ ಸರ್ಕಾರವು ಜಾತಿವಾರು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಮಾಡಿಸಬೇಕು.
* ಇಘಖ 10% ಮೀಸಲಾತಿಯನ್ನು ರದ್ದು ಪಡಿಸುವಂತೆ ಒತ್ತಾಯಿಸುವುದು.
* ಮಹಿಳಾ ರಾಜಕೀಯ ಮೀಸಲಾತಿ ಕಾಯ್ದೆಯನ್ನು ಕೂಡಲೇ ಜಾರಿ ಮಾಡಬೇಕು. ರಾಜಕೀಯ ಕ್ಷೇತ್ರದಲ್ಲೂ ಒಳ ಮೀಸಲಾತಿ ಕಲ್ಪಿಸಬೇಕು.
* ರಾಜಕೀಯ ಮೀಸಲಾತಿಯನ್ನು ಲೋಕಸಭೆ, ವಿಧಾನಸಭೆಗಳಲ್ಲಿ ಹಿಂದುಳಿದ ಜಾತಿಗಳಿಗೆ ಮತ್ತು ಅಲ್ಪಸಂಖ್ಯಾತರಿಗೆ ಅವಕಾಶ ಕಲ್ಪಿಸಬೇಕು
* ಜನಸಂಖ್ಯೆ ಅನುಗುಣವಾಗಿ ಶೇಕಡವಾರು ಪ್ರಮಾಣದಲ್ಲಿ ಮೀಸಲಾತಿಯನ್ನು ಹೆಚ್ಚಿಸಬೇಕು. ಖಾಸಗಿ ಕ್ಷೇತ್ರಕ್ಕೂ ಮೀಸಲಾತಿ ವಿಸ್ತರಿಸಬೇಕು.

ಈ ಎಲ್ಲಾ ಹಕ್ಕೊತ್ತಾಯದೊಂದಿಗೆ ಅಹಿಂದ ಸಮಾವೇಶಕ್ಕೆ ನಿರ್ಧರಿಸಲಾಗಿದೆ. ಸಮಾವೇಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಆಹ್ವಾನ ನೀಡಿ ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಕುತೂಹಲ ಮೂಡಿಸಿದೆ. ತಾಂತ್ರಿಕವಾಗಿ ಸಿಎಂ ಸಿದ್ದರಾಮಯ್ಯ ಸಮಾವೇಶದಲ್ಲಿ ಭಾಗವಹಿಸುವುದು ಕಷ್ಟ. ಆದ್ದರಿಂದ ಈ ಬೃಹತ್ ಸಮಾವೇಶದಲ್ಲೇ ಎರಡನೇ ಬಾರಿಗೆ ಮುಖ್ಯಮಂತ್ರಿ ಆದ ಸಿದ್ದರಾಮಯ್ಯ ಅವರಿಗೆ ಬೃಹತ್ ಅಭಿನಂದನೆ ಹಾಗೂ ಸನ್ಮಾನ ಮಾಡುವ ಬಗ್ಗೆಯೂ ಅಹಿಂದ ವರ್ಗದ ನಾಯಕರು ಚಿಂತನೆ ನಡೆಸಿದ್ದಾರೆ.

ಸಮಾವೇಶದಲ್ಲೇ ಸಿದ್ದರಾಮಯ್ಯ ಅವರಿಗೆ ಸನ್ಮಾನ ಇಟ್ಟುಕೊಂಡು ಆಹ್ವಾನಿಸುವ ಬಗ್ಗೆ ಚರ್ಚೆ ನಡೆದಿದೆ. ಆದರೆ ಇದು ಯಾವುದಕ್ಕೂ ಸಿಎಂ ಸಿದ್ದರಾಮಯ್ಯ ಇದುವರೆಗೆ ಸಮ್ಮತಿ ನೀಡಿಲ್ಲ.

ಜಾತಿಗಣತಿ ವರದಿ ಮಂಡಿಸಲು ಜಾಗತಿಕ ಲಿಂಗಾಯತ ಮಹಾಸಭಾ ಒತ್ತಾಯ

ಬೆಳಗಾವಿ: ಜಾತಿಯ ಗಣತಿ ವರದಿಯನ್ನು ಸ್ವೀಕಾರ ಮಾಡಬೇಕು ಹಾಗೂ ಎರಡು ಸದನಗಳಲ್ಲಿ ಮಂಡಿಸಿ ಚರ್ಚೆ ಮಾಡಬೇಕು ಎಂದ ನಿವೃತ್ತ ಐಎಎಸ್ ಅಧಿಕಾರಿ ಜಾಗತಿಕ ಲಿಂಗಾಯತ ಮಹಾ ಪ್ರಧಾನ ಕಾರ್ಯದರ್ಶಿಗಳಾದ ಶಿವಾನಂದ್ ಜಮಾದಾರ ಹೇಳಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ವಿಷಯ ತಿಳಿಸಿದ ಅವರು, 2014ರಲ್ಲಿ ಕರ್ನಾಟಕ ಸರ್ಕಾರ ರಾಜ್ಯದ ಬಜೆಟ್ ದಿಂದ 160 ಕೋಟಿಗಳನ್ನು ಮೀಸಲಿಟ್ಟು ಈ ವರದಿಯನ್ನು ಸಿದ್ಧಪಡಿಸಿತ್ತು. ಆದರೆ 8 ವರ್ಷಗಳ ಕಾಲ ಈ ವರದಿ ಸರ್ಕಾರ ಸ್ವೀಕರಿಸದೆ ಇರಲು ಕಾರಣವೇನು ಇದನ್ನು ಕೂಡಲೇ ಸ್ವೀಕರಿಸಬೇಕು ಹಾಗೂ ಸದನಗಳಲ್ಲಿ ಚರ್ಚೆ ಆಗಬೇಕೆಂದು ಎಂದು ಒತ್ತಯಿಸಿದರು.

ಇಲ್ಲಿವರೆಗೆ ಸ್ವೀಕರಿಸದೆ ಇರುವ ಕಾರಣ ಇದರ ಹಿಂದೆ ಯಾರು ತಪ್ಪು ಮಾಡಿದ್ದಾರೆ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಅಖಿಲ ಭಾರತ ವೀರಶೈವ ಮಹಾಸಭೆಯ 24ನೇ ಅಧಿವೇಶನದಲ್ಲಿ 8 ನಿರ್ಣಯಗಳನ್ನ ಸ್ವೀಕರಿಸಿದೆ.

ಅವುಗಳಲ್ಲಿ 7 ಪ್ರಮುಖ ನಿರ್ಣಯಗಳನ್ನು ಜಾಗತಿಕ ಲಿಂಗಾಯತ ಮಹಾಸಭೆ ಬೆಂಬಲಿಸುತ್ತದೆ ಎಂದರು.

7 ನಿರ್ಣಯಗಳಲ್ಲಿ ಲಿಂಗಾಯತರು ಹಿಂದುಗಳಲ್ಲ ಆದ್ದರಿಂದ ಮುಂಬರುವ ಜನಗಣತಿಯಲ್ಲಿ ಲಿಂಗಾಯತರು ತಮ್ಮ ಧರ್ಮವನ್ನು ಹಿಂದು ಎಂಬ ಭರಿಸಬಾರದು ಅದಕ್ಕೆ ಬದಲಾಗಿ ಲಿಂಗಾಯತ ವೀರಶೈವ ಎಂದು ಭರಿಸಬೇಕು. ಬಿ.ಎಸ್. ಯಡಿಯೂರಪ್ಪನವರು ಲಿಂಗಾಯಿತರು ಹಿಂದುಗಳಲ್ಲ ಎಂಬುವುದು ಅಖಿಲ ಭಾರತ ವೀರಶೈವ ಮಹಾಸಭೆಯಲ್ಲಿ ನಿರ್ಣಯಕ್ಕೆ ಬದ್ಧರಾಗಿದ್ದಾರೆ? ಅಥವಾ ಇಲ್ಲ ಎಂಬುದು ತಮ್ಮ ನಿಲುವುವನ್ನು ಸ್ಪಷ್ಟಪಡಿಸಬೇಕು ಎಂದು ಜಾಗತಿಕ ಲಿಂಗಾಯತ ಮಹಾಸಭೆ ಮಾಜಿ ಮುಖ್ಯಮಂತ್ರಿಗಳಾದ ಯಡಿಯೂರಪ್ಪ ಈ ವಿಷಯದಲಿ ಅವರನ್ನು ಅಗ್ರಹಿಸುತದೆ ಮತ್ತು ತಮ್ಮ ನಿಲುವು ಬಹಿರಂಗಪಡಿಸಬೇಕು ಎಂದರು.

ಈ ಸಂದರ್ಭದಲ್ಲಿ ಬಸವರಾಜ್ ರೊಟ್ಟಿ, ಜಾಗತಿಕ ಲಿಂಗಾಯತ ಮಹಾ ಸಭೆಯ ಬೆಳಗಾವಿ ಜಿಲ್ಲಾಧ್ಯಕ್ಷರು ಹಾಗೂ ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕೋಟಿ ಕೋಟಿ ಲೂಟಿ ಮಾಡಿ ಮುನ್ನುಗ್ಗುತ್ತಿದೆ 'ಸಲಾರ್' ಚಿತ್ರ

ಮುಂಬೈ: ಸಲಾರ್ ಪ್ರಭಾಸ್ ನಟನೆಯ ಪ್ರಶಾಂತ್ ನೀಲ್ ನಿರ್ದೇಶನದ ಸಿನಿಮಾ. ವಿಶ್ವದಾದ್ಯಂತ ಬಿಡುಗಡೆಗೊಂಡು ಈ ಸಿನಿಮಾದ ದೊಡ್ಡ ಸಂಚಲನ ಸೃಷ್ಟಿಸಿದೆ. ಬಹುಜನರ ಮನ ಗೆದ್ದಿರುವ ಈ ಸಿನಿಮಾ ಒಟ್ಟು ಎಷ್ಟು ಕಲೆಕ್ಷನ್ ಮಾಡಿದೆ ಗೊತ್ತಾ? ಈ ಬಗ್ಗೆ ಮಾಹಿತಿ ಇಲ್ಲಿದೆ.

ಪ್ರಭಾಸ್ 'ಸಲಾರ್' ಸಿನಿಮಾದ 5 ದಿನದಲ್